# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: 04 | ಸಂಚಿಕೆ: 80 Issue: 80 | ರಾಯಚೂರು Raichur | 12-09-2026 | ಶನಿವಾರ Saturday | ಪುಟ : 04 Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685



ಅವರಿಗೆ ನನ್ನ ಕಾಲೆಳೆಯುವುದು ಇಷ್ಟ: ವೈಭವ್ ಸೂರ್ಯವಂಶಿ ಜೊತೆಗಿನ ಬಾಂಧವ್ಯದ ಬಗ್ಗೆ ಮೊಹಮ್ಮದ್ ಶಮಿ




# ಮೋದಿ-ಪೆಜೆಶ್ಕಿಯನ್ ಮಾತುಕತೆ: ಉಭಯ ಲಾಭದಾಯಕ ಸಂಬಂಧಕ್ಕೆ ಒತ್ತು

ನವದೆಹಲಿ: ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಪ್ರಾದೇಶಿಕ ಸ್ಥಿರತೆ, ಸಮುದ್ರಯಾನ ಭದ್ರತೆ, ವ್ಯಾಪಾರ ಹಾಗೂ ಇಂಧನ ಪೂರೈಕೆ ಸೇರಿದಂತೆ ಪ್ರಮುಖ ವಿಚಾರಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಮತ್ತು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ನವದೆಹಲಿಯಲ್ಲಿ ಮಾತುಕತೆ ನಡೆಸಿದರು.

ಭಾರತಇರಾನ್ ದ್ವಿಪಕ್ಷೀಯ ಸಂಬಂಧಗಳನ್ನು ದೀರ್ಘಕಾಲೀನ ದೃಷ್ಟಿಕೋನದೊಂದಿಗೆ ಮತ್ತಷ್ಟು ಬಲಪಡಿಸುವುದರ ಜೊತೆಗೆ ಉಭಯ ರಾಷ್ಟ್ರಗಳಿಗೂ ಲಾಭದಾಯಕವಾಗುವ ಕಾರ್ಯತಂತ್ರವನ್ನು ಅನುಸರಿಸುವ ಕುರಿತು ನಾಯಕರು ಒಮ್ಮತ ವ್ಯಕ್ತಪಡಿಸಿದರು.

ಬ್ರಿಕ್ಸ್ ಶೃಂಗಸಭೆಯ ಅಂಗವಾಗಿ ನಡೆದ ಈ ಸಭೆಯು ಎರಡು ವಾರಗಳಿಗಿಂತ ಕಡಿಮೆ ಅವಧಿಯಲ್ಲಿ ಉಭಯ ನಾಯಕರ ನಡುವೆ ನಡೆದ ಎರಡನೇ ಭೇಟಿಯಾಗಿದೆ. ಇದಕ್ಕೂ ಮುನ್ನ ಆಗಸ್ಟ್ 31ರಂದು ಬಿಷ್ಕೆಕ್‌ನಲ್ಲಿ ನಡೆದ ಎಸ್‌ಸಿಒ ಶೃಂಗಸಭೆಯ ಸಂದರ್ಭದಲ್ಲಿ ಮೋದಿ ಮತ್ತು ಪೆಜೆಶ್ಕಿಯನ್ ಭೇಟಿಯಾಗಿ ಮಾತುಕತೆ ನಡೆಸಿದ್ದರು.

ಸಭೆಯ ಬಳಿಕ ಪ್ರತಿಕ್ರಿಯಿಸಿದ ಪ್ರಧಾನಿ ಮೋದಿ, “ಬಿಷ್ಕೆಕ್‌ನಿಂದ ದೆಹಲಿಯವರೆಗೆ ಫಲಪ್ರದ ಚರ್ಚೆಗಳು ಮುಂದುವರಿದಿವೆ. ಭಾರತಇರಾನ್ ಸ್ನೇಹ ಮತ್ತು ದೀರ್ಘಕಾಲೀನ ಸಂಬಂಧಗಳ ಕುರಿತು ನಾವು ಚರ್ಚಿಸಿದ್ದೇವೆ. ಉಭಯ ದೇಶಗಳಿಗೂ ಲಾಭವಾಗುವ ಕಾರ್ಯತಂತ್ರದೊಂದಿಗೆ ಮುಂದುವರಿಯಬೇಕು ಎಂಬುದು ನಮ್ಮ ಅಭಿಪ್ರಾಯವಾಗಿದೆ” ಎಂದು ತಿಳಿಸಿದರು.

ಪಶ್ಚಿಮ ಏಷ್ಯಾದಲ್ಲಿನ ಪ್ರಸ್ತುತ ಪರಿಸ್ಥಿತಿಯೂ ಮಾತುಕತೆಯಲ್ಲಿ ಪ್ರಮುಖವಾಗಿ ಚರ್ಚೆಗೆ ಬಂದಿದ್ದು, ಪ್ರದೇಶದಲ್ಲಿ ಶಾಶ್ವತ ಶಾಂತಿ ಮತ್ತು ಸ್ಥಿರತೆ ಸ್ಥಾಪನೆಯಾಗಬೇಕೆಂಬ ಭಾರತದ ಬದ್ಧತೆಯನ್ನು ಮೋದಿ ಪುನರುಚ್ಚರಿಸಿದರು. ಉದ್ಭವಿಸಿರುವ ಸಮಸ್ಯೆಗಳಿಗೆ ಸಂವಾದ




ಮತ್ತು ರಾಜತಾಂತ್ರಿಕ ಮಾರ್ಗಗಳ ಮೂಲಕವೇ ಪರಿಹಾರ ಕಂಡುಕೊಳ್ಳಬೇಕು ಎಂಬ ಭಾರತದ ನಿಲುವನ್ನು ಅವರು ಒತ್ತಿ ಹೇಳಿದರು.

ನೌಕಾಯಾನ ಮತ್ತು ವಾಣಿಜ್ಯ ಸ್ವಾತಂತ್ರ್ಯ ಕಾಪಾಡುವುದರ ಜೊತೆಗೆ ನಾವಿಕರ ಸುರಕ್ಷತೆ ಹಾಗೂ ಕ್ಷೇಮವನ್ನು ಖಚಿತಪಡಿಸುವುದು ಅಗತ್ಯವಾಗಿದೆ. ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಲು ನಿರಂತರ ಪ್ರಯತ್ನಗಳು ನಡೆಯಬೇಕೆಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಇದೇ ವೇಳೆ ಬ್ರಿಕ್ಸ್ ಬಿಸಿನೆಸ್ ಫೋರಮ್ ನಲ್ಲಿ ಮಾತನಾಡಿದ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್, ಸದಸ್ಯ ರಾಷ್ಟ್ರಗಳ ನಡುವಿನ ವ್ಯಾಪಾರ ವ್ಯವಹಾರಗಳಲ್ಲಿ ರಾಷ್ಟ್ರೀಯ ಕರೆನ್ಸಿಗಳ ಬಳಕೆಯನ್ನು ವಿಸ್ತರಿಸುವ ಅಗತ್ಯವನ್ನು ಪ್ರತಿಪಾದಿಸಿದರು. ಸ್ಥಳೀಯ ಕರೆನ್ಸಿಗಳ ಬಳಕೆ ಹೆಚ್ಚಿಸುವುದರ ಜೊತೆಗೆ ಕರೆನ್ಸಿ ಅಪಾಯಗಳ ನಿರ್ವಹಣೆ ಮತ್ತು ಪರಸ್ಪರ ಪಾವತಿ ಇತ್ಯರ್ಥಕ್ಕೆ ಸೂಕ್ತ ವ್ಯವಸ್ಥೆ ರೂಪಿಸಬೇಕು ಎಂದು ಹೇಳಿದರು.

ಜಾಗತಿಕ ಹಣಕಾಸು ವ್ಯವಸ್ಥೆ ಕೆಲವೇ ಕರೆನ್ಸಿಗಳ ಮೇಲೆ ಹೆಚ್ಚಿನ ಅವಲಂಬನೆ ಹೊಂದಿರುವುದರಿಂದ ರಾಜಕೀಯ ಆಘಾತಗಳಿಗೆ ಒಳಗಾಗುವ ಸಾಧ್ಯತೆ ಹೆಚ್ಚಿದೆ ಎಂದು ಅಭಿಪ್ರಾಯಪಟ್ಟ ಅವರು, ಪರ್ಯಾಯ ಹಾಗೂ ಸುಸ್ಥಿರ ಹಣಕಾಸು ವ್ಯವಸ್ಥೆಗಳನ್ನು ರೂಪಿಸುವಲ್ಲಿ ಬ್ರಿಕ್ಸ್ ರಾಷ್ಟ್ರಗಳು ಹೆಚ್ಚಿನ ಪಾತ್ರ ವಹಿಸಬೇಕು ಎಂದರು.

ಮೂಲಸೌಕರ್ಯ ಹಾಗೂ ಇಂಧನ ಯೋಜನೆಗಳಿಗೆ ಅಗತ್ಯ ಹಣಕಾಸು ಒದಗಿಸುವ ನಿಟ್ಟಿನಲ್ಲಿ ನ್ಯೂ ಡೆವಲಪ್‌ಮೆಂಟ್ ಬ್ಯಾಂಕ್ ಪ್ರಮುಖ ಪಾತ್ರ ವಹಿಸಬೇಕು. ಖಾಸಗಿ ಬಂಡವಾಳ ಆಕರ್ಷಿಸಲು ವಿಶೇಷ ಸಾಲ ಸೌಲಭ್ಯ, ಸ್ಥಳೀಯ ಕರೆನ್ಸಿ ಆಧಾರಿತ ಹಣಕಾಸು ವ್ಯವಸ್ಥೆ ಹಾಗೂ ಖಾತರಿ ಸಾಧನಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಪೆಜೆಶ್ಕಿಯನ್ ಸಲಹೆ ನೀಡಿದರು.

ಕೃತಕ ಬುದ್ಧಿಮತ್ತೆ ಜಾಗತಿಕ ಆರ್ಥಿಕತೆಯಲ್ಲಿ ಮಹತ್ವದ ಪರಿವರ್ತನೆ ತರುತ್ತಿರುವ ಹಿನ್ನೆಲೆಯಲ್ಲಿ ಡಿಜಿಟಲ್ ಆರ್ಥಿಕತೆಯ ರೂಪುಗೊಳಿಸುವಿಕೆಯಲ್ಲಿ ಬ್ರಿಕ್ಸ್ ರಾಷ್ಟ್ರಗಳು ಮುಂಚೂಣಿ ಪಾತ್ರ ವಹಿಸಬೇಕು ಎಂದ ಅವರು, ಬ್ರಿಕ್ಸ್ ಕೇವಲ ತಂತ್ರಜ್ಞಾನದ ಬಳಕೆದಾರರ ಗುಂಪಾಗದೇ ಜ್ಞಾನ ಸೃಷ್ಟಿ, ಡಿಜಿಟಲ್ ಮಾನದಂಡಗಳ ರೂಪಿಕೆ ಮತ್ತು ನಿರ್ಣಾಯಕ ಮೂಲಸೌಕರ್ಯಗಳ ಸೈಬರ್ ಭದ್ರತೆಯಲ್ಲಿಯೂ ಸಕ್ರಿಯವಾಗಿ ಕೊಡುಗೆ ನೀಡಬೇಕು ಎಂದು ಹೇಳಿದರು.

## ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ

ರಾಯಚೂರು: ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಕೆ. ಶಾಂತಪ್ಪ ಅವರು ಮಾಜಿ ಸಚಿವ ಎನ್. ಎಸ್. ಬೋಸರಾಜು ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿಯಾಗಿ ಪುಷ್ಪಗುಚ್ಛ ನೀಡಿ ಗೌರವ ಸಲ್ಲಿಸಿದರು.





ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ ನೂತನ ಜವಾಬ್ದಾರಿ ವಹಿಸಿಕೊಂಡ ಹಿನ್ನೆಲೆಯಲ್ಲಿ ಪಕ್ಷದ ಹಿರಿಯ ನಾಯಕರನ್ನು ಭೇಟಿಯಾದ ಕೆ. ಶಾಂತಪ್ಪ ಅವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಶುಭ ಹಾರೈಸಿ, ಪಕ್ಷ ಸಂಘಟನೆಯನ್ನು ಮತ್ತಷ್ಟು ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸಲಹೆ ನೀಡಿದರು.

ರಾಯಚೂರು ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಲಿಷ್ಠವಾದ ಕಾರ್ಯಕರ್ತರ ಪಡೆಯಿದ್ದು, ಪಕ್ಷದ ತತ್ವ-ಸಿದ್ಧಾಂತಗಳು ಹಾಗೂ ಸರ್ಕಾರದ ಜನಪರ ಕಾರ್ಯಕ್ರಮಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಜವಾಬ್ದಾರಿ ಜಿಲ್ಲಾ ಸಮಿತಿಯ ಮೇಲಿದೆ. ಪಕ್ಷದ ಹಿರಿಯರು, ಮುಖಂಡರು ಹಾಗೂ ತಳಮಟ್ಟದ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಎಲ್ಲರನ್ನೂ ಒಗ್ಗೂಡಿಸಿಕೊಂಡು ಪಕ್ಷದ ಸಂಘಟನೆಗೆ ಆದ್ಯತೆ ನೀಡಬೇಕು ಎಂದು ನಾಯಕರು ಸೂಚಿಸಿದರು.

ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪಕ್ಷದ ಸಂಘಟನೆಯನ್ನು ಇನ್ನಷ್ಟು ಚುರುಕುಗೊಳಿಸಿ, ಬೂತ್ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಕಾರ್ಯಕರ್ತರ ನಡುವೆ ಸಮನ್ವಯ ಸಾಧಿಸಬೇಕು. ಪಕ್ಷಕ್ಕಾಗಿ ಹಲವು ವರ್ಷಗಳಿಂದ ದುಡಿಯುತ್ತಿರುವ ಹಿರಿಯ ಕಾರ್ಯಕರ್ತರಿಗೆ ಗೌರವ 2ನೇ ಪುಟಕ್ಕೆ

## ಗಣೇಶೋತ್ಸವ ಶಾಂತಿಯುತವಾಗಿ ಆಚರಿಸಿ: ಎಸ್‌ಪಿ ಅರುಣಾಂಗ್ಶು ಗಿರಿ

ರಾಯಚೂರು: ಶಕ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಯ ವಿವಿಧ ಗಣೇಶ ಮಂಡಳಿಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಸೆ.11ರಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಶು ಗಿರಿ ಐಪಿಎಸ್ ಅವರ ನೇತೃತ್ವದಲ್ಲಿ ಶಾಂತಿ ಸಭೆ ನಡೆಸಲಾಯಿತು.



ಮುಂಬರುವ ಗಣೇಶೋತ್ಸವ ಹಾಗೂ ಗಣೇಶ ಮೂರ್ತಿಗಳ ವಿಸರ್ಜನಾ ಕಾರ್ಯಕ್ರಮಗಳನ್ನು ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಶಾಂತಿಯುತ, ಸೌಹಾರ್ದಯುತ ಹಾಗೂ ಸಂಭ್ರಮದಿಂದ ಆಚರಿಸುವ ನಿಟ್ಟಿನಲ್ಲಿ ಸಭೆಯಲ್ಲಿ ಗಣೇಶ ಮಂಡಳಿಗಳ ಸದಸ್ಯರಿಗೆ ಅಗತ್ಯ ಸಲಹೆ-ಸೂಚನೆಗಳನ್ನು ನೀಡಲಾಯಿತು.

ಗಣೇಶೋತ್ಸವವು ಭಕ್ತಿ, ಸಂಭ್ರಮ ಹಾಗೂ ಸಾಮಾಜಿಕ ಸೌಹಾರ್ದತೆಯ ಸಂಕೇತವಾಗಿದ್ದು, ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಪ್ರತಿಯೊಂದು ಮಂಡಳಿಯವರು ಜವಾಬ್ದಾರಿಯಿಂದ ಹಬ್ಬವನ್ನು ಆಚರಿಸಬೇಕು. ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಯಿಂದ ಹಿಡಿದು ವಿಸರ್ಜನೆಯವರೆಗೂ ಪೊಲೀಸ್ ಇಲಾಖೆಯ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಶು ಗಿರಿ ತಿಳಿಸಿದರು.

ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಸ್ಥಳಗಳಲ್ಲಿ ಸಾರ್ವಜನಿಕರ ಹಾಗೂ ವಾಹನ ಸಂಚಾರಕ್ಕೆ ಅಡ್ಡಿಯಾಗದಂತೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಬೇಕು. ಕಾರ್ಯಕ್ರಮ ನಡೆಯುವ ಸ್ಥಳಗಳಲ್ಲಿ ಅಗತ್ಯ ಬೆಳಕಿನ ವ್ಯವಸ್ಥೆ, ಸುರಕ್ಷತಾ ಕ್ರಮ ಹಾಗೂ ಭಕ್ತರ ಸಂಚಾರಕ್ಕೆ ಅನುಕೂಲವಾಗುವ ವ್ಯವಸ್ಥೆ ಕಲ್ಪಿಸಬೇಕು. ಮಂಡಳಿಯ ಪದಾಧಿಕಾರಿಗಳು ಮತ್ತು ಸ್ವಯಂಸೇವಕರು 2ನೇ ಪುಟಕ್ಕೆ






## ಗಣೇಶ ವಿಸರ್ಜನೆ ಹಿನ್ನಲೆಯಲ್ಲಿ ಮದ್ಯ ಮಾರಾಟ ನಿಷೇಧ: ಜಿಲ್ಲಾಧಿಕಾರಿ ಪೂವಿತಾ



ರಾಯಚೂರು ಸೆ. 11 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಾದ್ಯಂತ ಸಾಮೂಹಿಕ ಶ್ರೀ ಗಣೇಶ ಮೂರ್ತಿಗಳ ವಿಸರ್ಜನೆ ಸಮಯದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಮುಂಜಾಗ್ರತೆ ಕ್ರಮವಾಗಿ ಅಬಕಾರಿ ಕಾಯ್ದೆ 1965ರ ಕಲಂ.21 (1) ರನ್ವಯ ನಿಗದಿತ ದಿನಾಂಕಗಳದು ಎಲ್ಲಾ ರೀತಿಯ ಮದ್ಯ ತಯಾರಿಕಾ ಘಟಕಗಳು, ಸಾಗಾಣಿಕೆ ಮತ್ತು ಸಂಗ್ರಹಣೆಯನ್ನು ಹಾಗೂ ಮಾರಾಟ ಮಳಿಗೆಗಳನ್ನು ಬಂದ್ ಇಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಪೂವಿತಾ ಎಸ್., ಅವರು ಆದೇಶ ಹೊರಡಿಸಿದ್ದಾರೆ.

ರಾಯಚೂರು ಜಿಲ್ಲೆಯಾದ್ಯಂತ ಮದ್ಯ ಮಾರಾಟ, ಸಾಗಾಣಿಕೆ ನಿಷೇಧ ದಿನಾಂಕ, ಪ್ರದೇಶ ಮತ್ತು ಅವಧಿ ದಿನಾಂಕ:14-09-2026 ರಂದು (1ನೇ ದಿನ ಗಣೇಶ ವಿಸರ್ಜನೆ) ದಿನಾಂಕ:14-09-2026 ರಂದು ಬೆಳಿಗ್ಗೆ 06ಗಂಟೆಯಿದ ದಿನಾಂಕ:15-09-2026 ಬೆಳಿಗ್ಗೆ 06ಗಂಟೆಯವರೆಗೆ

ದಿನಾಕ:16-09-2026 ರಂದು (3ನೇ ದಿನ ಗಣೇಶ ವಿಸರ್ಜನೆ) ದಿನಾಂಕ:16-09-2026 ರಂದು ಬೆಳಿಗ್ಗೆ 06ಗಂಟೆಯಿದ ದಿನಾಂಕ:17-09-2026 ಬೆಳಿಗ್ಗೆ 06ಗಂಟೆಯವರೆಗೆ

ದಿನಾಕ: 2ನೇ ಪುಟಕ್ಕೆ

## ವಿಕಸಿತ ಭಾರತ ಅಭಿಯಾನ ಯುವಕ, ಯುವತಿಯರು ಭಾಗವಹಿಸಲು ಸ್ವಾತಿ ಗುಗುಲೋತ್ ಕರೆ




ರಾಯಚೂರು ಸೆಪ್ಟಂಬರ್ 11 (ಕರ್ನಾಟಕ ವಾರ್ತೆ): ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ವ್ಯಾಪ್ತಿಯ ಮೇರಾ ಯುವ ಭಾರತ (ಮೈ ಭಾರತ) ರಾಯಚೂರು ಕಚೇರಿ ವತಿಯಿಂದ ವಿಕಸಿತ ಭಾರತ್ ಯಂಗ್ ಲೀಡರ್ಸ್ ಡೈಲಾಗ್ 2027 ಹಾಗೂ ವಿಕಸಿತ ಭಾರತ್ ರಸಪ್ರಶ್ನೆ ಜಿಲ್ಲಾಮಟ್ಟದ ಜಾಗೃತಿ ಮತ್ತು ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಲು ಮೇರಾ ಯುವ ಭಾರತ ಕೇಂದ್ರ ರಾಯಚೂರಿನ ಜಿಲ್ಲಾ ಯುವ ಅಧಿಕಾರಿ ಸ್ವಾತಿ ಗುಗುಲೋತ್ ಹೇಳಿದರು.

ಸೆಪ್ಟಂಬರ್ 11ರ ಶುಕ್ರವಾರ ರಾಯಚೂರಿನ ಮೇರಾ ಯುವ ಭಾರತ ಕೇಂದ್ರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಯುವಕರಲ್ಲಿ ನಾಯಕತ್ವ ಗುಣ, ಸೃಜನಶೀಲತೆ, ಸಮಸ್ಯೆ ಪರಿಹರಿಸುವ ಸಾಮರ್ಥ್ಯ ಹಾಗೂ ನಾಗರಿಕ ಜವಾಬ್ದಾರಿಯನ್ನು ಬೆಳೆಸುವ ಉದ್ದೇಶದಿಂದ ಈ ರಾಷ್ಟ್ರೀಯ ಉಪಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅಭಿಯಾನದ ಮಾಹಿತಿ ಜಿಲ್ಲೆಯ ನಗರ ಪ್ರದೇಶಗಳ ಜೊತೆಗೆ ಗ್ರಾಮೀಣ ಭಾಗಗಳಲ್ಲಿಯೂ ತಲುಪಿಸುವ ಗುರಿ ಹೊಂದಲಾಗಿದೆ.

ಸ್ಥಳೀಯ ಶಿಕ್ಷಣ ಸಂಸ್ಥೆಗಳು, ಯುವ ಸಂಘಟನೆಗಳು, ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ಘಟಕಗಳ ಸಹಕಾರದೊಂದಿಗೆ 2ನೇ ಪುಟಕ್ಕೆ

## ಜಿಲ್ಲಾ ಕಾಂಗ್ರೆಸ್ ನೂತನ ಅಧ್ಯಕ್ಷ ಕೆ. ಶಾಂತಪ್ಪರಿಗೆ ಬೆಂಗಳೂರಿನಲ್ಲಿ ಶುಭಾಶಯ

ಬೆಂಗಳೂರು: ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಕೆ. ಶಾಂತಪ್ಪ ಅವರು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅವರೊಂದಿಗೆ ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ, ಸಣ್ಣ ನೀರಾವರಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆ ಸಚಿವ ಡಾ. ಅಜಯ್ ಸಿಂಗ್ ಅವರನ್ನು ಭೇಟಿಯಾಗಿ ಪುಷ್ಪಗುಚ್ಛ ನೀಡಿ ಅಭಿನಂದನೆ ಸಲ್ಲಿಸಿದರು.



ನೂತನ ಜವಾಬ್ದಾರಿ ಸ್ವೀಕರಿಸಿರುವ ಕೆ. ಶಾಂತಪ್ಪ ಅವರಿಗೆ ಮುಖಂಡರು ಶುಭ ಹಾರೈಸಿ, ರಾಯಚೂರು ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಇನ್ನಷ್ಟು ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಎಲ್ಲ ಹಂತದ ನಾಯಕರು ಹಾಗೂ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವಂತೆ ಸಲಹೆ ನೀಡಿದರು.

ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪಕ್ಷದ ಸಂಘಟನೆಯನ್ನು ವಿಸ್ತರಿಸುವುದರ ಜೊತೆಗೆ ಬೂತ್ ಮಟ್ಟದಿಂದಲೇ ಕಾರ್ಯಕರ್ತರನ್ನು ಸಕ್ರಿಯಗೊಳಿಸಬೇಕು. ಪಕ್ಷದ ತತ್ವ, ಸಿದ್ಧಾಂತಗಳನ್ನು ಜನರಿಗೆ ತಲುಪಿಸುವುದರೊಂದಿಗೆ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಜನಪರ ಯೋಜನೆಗಳು ಮತ್ತು ಕಾರ್ಯಕ್ರಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಮುಖಂಡರು ಸೂಚಿಸಿದರು.

ಪಕ್ಷದಲ್ಲಿ ಹಿರಿಯರು, ಯುವಕರು, ಮಹಿಳೆಯರು ಹಾಗೂ ವಿವಿಧ ಸಮುದಾಯಗಳ ಕಾರ್ಯಕರ್ತರನ್ನು ಸಂಘಟನೆಯ ಮುಖ್ಯವಾಹಿನಿಗೆ ತರಬೇಕು. ಭಿನ್ನಾಭಿಪ್ರಾಯಗಳಿಗೆ ಅವಕಾಶ ನೀಡದೆ ಎಲ್ಲರನ್ನು ಒಂದೇ ವೇದಿಕೆಯಡಿ ಸೇರಿಸಿಕೊಂಡು ಪಕ್ಷದ ಬಲವರ್ಧನೆಗೆ ನಿರಂತರವಾಗಿ ಶ್ರಮಿಸಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಜಿಲ್ಲಾ ಕಾಂಗ್ರೆಸ್ ಸಮಿತಿಯನ್ನು ಇನ್ನಷ್ಟು ಕ್ರಿಯಾಶೀಲಗೊಳಿಸುವ ಅಗತ್ಯವಿದೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಚಿವ ಡಾ. ಅಜಯ್ ಸಿಂಗ್ ಅವರು ಕೆ. ಶಾಂತಪ್ಪ ಅವರನ್ನು ಸನ್ಮಾನಿಸಿ ನೂತನ 2ನೇ ಪುಟಕ್ಕೆ

## ಸೆ. 23ರಂದು ವಾರ್ಷಿಕ ಮಹಾ ಸಭೆ

ರಾಯಚೂರು ಸೆಪ್ಟಂಬರ್ 11 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಸಂಘ ನಿಯಮಿತದ 2025-26ನೇ ಸಾಲಿನ ಸಂಘದ 31ನೇ ವಾರ್ಷಿಕ ಮಹಾ ಸಭೆಯನ್ನು ಸೆಪ್ಟಂಬರ್ 23ರ ಬೆಳಿಗ್ಗೆ 11:30ಗಂಟೆಗೆ ಸಂಘದ ಕಟ್ಟಡ ನಿವೇಶನ ಸಂಖ್ಯೆ 68, ಕೈಗಾರಿಕಾ ವಸಾಹತು, ಹೈದ್ರಾಬಾದ್ ರಸ್ತೆ, ರಾಯಚೂರು ಕಚೇರಿಯಲ್ಲಿ ಸಂಘದ ಅಧ್ಯಕ್ಷರಾದ ಡಿ.ವೀರೇಶ ಕುಮಾರ ಇವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ.

ಸಂಘದ ಸದಸ್ಯರುಗಳಿಗೆ ಈಗಾಗಲೇ ನೋಟೀಸುಗಳನ್ನು ಕಳುಹಿಸಲಾಗಿದೆ. ಸದಸ್ಯರುಗಳಿಗೆ ನೋಟೀಸು ಮುಟ್ಟದೇ ಇದ್ದಲ್ಲಿ ಇದನ್ನೇ ನೋಟೀಸು ಎಂದು ಪರಿಗಣಿಸಿ ವಾರ್ಷಿಕ ಮಹಾಸಭೆಗೆ ತಪ್ಪದೇ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಸಂಘ ನಿಮಿಮಿತದ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಸರ ಸ್ನೇಹಿ ಗಣಪತಿ ಹಬ್ಬವನ್ನು ಆಚರಿಸೋಣ ಬನ್ನಿ, ಆದರೆ ಗಣೇಶನ ಹಬ್ಬವು ಪರಿಸರಕ್ಕೆ ಮಾರಕವಾಗದಿರಲಿ

ರಾಯಚೂರು ಸೆಪ್ಟಂಬರ್ 11 (ಕರ್ನಾಟಕ ವಾರ್ತೆ): ಗಣೇಶ ನಮ್ಮೆಲ್ಲರ ನೆಚ್ಚಿನ ದೇವರು ವಿಘ್ನ ವಿನಾಯಕ, ವಿದ್ಯಾಗಣಪತಿ, ಆನೆಯ ಮುಖ, ಮನುಷ್ಯನ ದೇಹ, ಹಾವಿನ ಪಟ್ಟಿ, ಇಲಿ ಸವಾರಿ ಅದೆಲ್ಲವೂ ಜೀವ ವೈವಿಧ್ಯದ ಸಂಕೇತ. ಆದ್ದರಿಂದ, ಗಣೇಶ ಚತುರ್ಥಿ ಹಬ್ಬವನ್ನು ಅತ್ಯಂತ ಶ್ರದ್ಧೆ ಮತ್ತು ವಿಜೃಂಭಣೆಯ ಜೊತೆಗೆ ನಿಸರ್ಗದ ಸಮತೋಲನವನ್ನು ಕಾಪಾಡಬೇಕು. ನಿಷೇಧಿತ-ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ನಿಂದ ತಯಾರಿಸಿದ ಮತ್ತು ರಾಸಾಯನಿಕ/ಭಾರ ಲೋಹ ಆಧಾರಿತ ಬಣ್ಣಗಳಿಂದ ಅಲಂಕರಿಸಲ್ಪಟ್ಟ ಮೂರ್ತಿಗಳು ನೈಸರ್ಗಿಕವಾಗಿ ಕರಗುವುದಿಲ್ಲ. ನೀರಿನಲ್ಲಿ ಕರಗಿದ ಆಮ್ಲಜನಕವನ್ನು ಕುಗ್ಗಿಸುತ್ತವೆ.

ಖಾಯಂ ಗಡಸುತನವನ್ನು ಹೆಚ್ಚಿಸುತ್ತವೆ ಮತ್ತು ವಿಸರ್ಜನೆಯ ನಂತರ ಜಲಮೂಲಗಳಿಗೆ ಪಾದರಸ, ಆರ್ಸೆನಿಕ್, ಸೀಸ, ಕ್ರೋಮಿಯಂ, ತಾಮ್ರ, ಕ್ಯಾಡ್ಮಿಯಂ, ಕೋಬಾಲ್ಟ್ ಮತ್ತು ಸತುಗಳಂತಹ ವಿಷಕಾರಿ ಭಾರ ಲೋಹಗಳನ್ನು ಬಿಡುಗಡೆ ಮಾಡಿ ಜಲ ಮೂಲಗಳಲ್ಲಿ ವಾಸಿಸುವ ಜೀವ ಜಂತುಗಳ ಜೀವ ಮತ್ತು ಬದುಕಿಗೆ ವಿಘ್ನ ತರುತ್ತದೆ. ಆದ್ದರಿಂದ ನಿಷೇಧಿತ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ನಿಂದ ತಯಾರಿಸಿದ ಮೂರ್ತಿಗಳನ್ನು ಬಳಸದೇ ಪರಿಸರ ಸ್ನೇಹಿ ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪೂಜಿಸಿ ಗಣೇಶ ಚತುರ್ಥಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಬೇಕೆಂದು ಈ ಮೂಲಕ ಕೋರಲಾಗಿದೆ.

ಸಾಧ್ಯವಾದಷ್ಟು ಕಡಿಮೆ ಎತ್ತರದ ಮತ್ತು ಪರಿಸರ ಸ್ನೇಹಿ ಮೂರ್ತಿಗಳು ಅಂದರೆ ಜೇಡಿಮಣ್ಣು/ಗೋಧಿ ಹಿಟ್ಟು/ಅರಶಿನ/ಇತರೆ ನೈಸರ್ಗಿಕ, ಜೈವಿಕವಾಗಿ ವಿಘಟನೀಯ ಮತ್ತು ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಿದ ಹಾಗೂ ಸಾವಯವ ಬಣ್ಣಗಳಿಂದ (ಅರಿಶಿನ/ಚಂದನ) ಅಲಂಕರಿಸಲ್ಪಟ್ಟ ಮಣ್ಣಿನ ಗಣೇಶನ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಆಚರಣೆ ಮಾಡಿ.

ಗಜಾನನ ಮಂಡಳಿ/ಸಘಗಳು ಪ್ರಸಾದ ಕೂಟ ಏರ್ಪಡಿಸಿದಾಗ ಅನ್ನ/ಪ್ರಸಾದವನ್ನು ಸ್ಟೀಲ್/ಇತರೆ ಜೈವಿಕ ವಿಘಟನೆಗಳಿಂದ ತಯಾರಿಸಿದ ಸ್ಟೀಲ್ ಪ್ಲೇಟ್/ಲೋಟ/ಚಮಚಗಳಲ್ಲಿ ವಿತರಣೆ ಮಾಡಿ ಹಾಗೂ ಅಡಿಕೆ ಎಲೆಯ ತಟ್ಟೆ, ದೊನ್ನೆಗಳನ್ನು ಹಬ್ಬದ ಆಚರಣೆ ಸಮಯದಲ್ಲಿ ಬಳಸಿ, ಯಾವುದೇ ಕಾರಣಕ್ಕು ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ವಸ್ತುಗಳನ್ನು ಬಳಸಬೇಡಿ.

ಮಣ್ಣಿನ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡುವ ಮುಂಚೆ ಅಲಂಕಾರಕ್ಕಾಗಿ ಬಳಸಿದ ಎಲ್ಲಾ ವಸ್ತುಗಳನ್ನು ತೆಗೆದು ಮತ್ತು ಮೂಲದಲ್ಲೇ ಪ್ರತ್ಯೇಕಿಸಿ ಮಹಾನಗರ ಪಾಲಿಕೆ/ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳು ಗೊತ್ತುಪಡಿಸಿದ ಸೂಚಿಸಿದ ಸ್ಥಳ/ಕೃತಕ ತೊಟ್ಟಿಗಳಲ್ಲಿ ವಿಸರ್ಜನೆ ಮಾಡುವುದು.

ಹಬ್ಬದ ಆಚರಣೆಯ ಸಂದರ್ಭದಲ್ಲಿ ಶಬ್ದ ಮಾಲಿನ್ಯ, ವಾಯು ಮಾಲಿನ್ಯ, ಮಣ್ಣು ಮಾಲಿನ್ಯ ಕಡಿಮೆ ಮಾಡಲು ಹಸಿರು ಪಟಾಕಿಗಳನ್ನು ಮಾತ್ರ ಬಳಕೆ ಮಾಡಿ. ಹಬ್ಬದ ಸಮಯದಲ್ಲಿ ಶಬ್ಧ ಮತ್ತು ವಾಯು ಮಾಲಿನ್ಯ ತಡೆಗೆ ಹೆಚ್ಚಿನ ಧ್ವನಿ ಹೊರಸೂಸುವ ಧ್ವನಿವರ್ಧಕ ಮತ್ತು ಪಟಾಕಿಗಳನ್ನು ಉಪಯೋಗಿಸಬೇಡಿ (ರಾತ್ರಿ ಸಮಯ 10ಗಂಟೆಯಿದ ಬೆಳಿಗ್ಗೆ 06ಗಂಟೆಯವರೆಗೆ ಧ್ವನಿವರ್ಧಕ/ಪಟಾಕಿಗಳ ಬಳಕೆಯನ್ನು ನಿಷೇಧಿಸಲಾಗಿದೆ).

ಪ್ರೀತಿಯ ರಾಯಚೂರು ನಾಗರಿಕರೇ, ಅಂದು ಬಾಲಗಂಗಾಧರ ತಿಲಕರು ರಾಷ್ಟ್ರಭಕ್ತಿಗಾಗಿ ಗಣೇಶೋತ್ಸವವನ್ನು ಸಾರ್ವತ್ರಿಕಗೊಳಿಸಿದ್ದರು. ಆದರೆ, ನಾವು ಇಂದು ನಮ್ಮ ಏಕತೆ, ಸಂಭ್ರಮಾಚರಣೆಗೋಸ್ಕರ ಮತ್ತು ಭೂಮಿಯ ಸಂರಕ್ಷಣೆಗಾಗಿ ಪರಿಸರ ಸ್ನೇಹಿಯಾಗಿ ಗಣೇಶ ಹಬ್ಬವನ್ನು ಆಚರಿಸೋಣ ಎಂದು ಕ.ರಾ.ಮಾ.ನಿ.ಮಂಡಳಿ, ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

ಪ್ರಯತ್ನವನ್ನು ಎಂದಿಗೂ ನಿಲ್ಲಿಸಬೇಡ, ಭರವಸೆಯನ್ನು ಯಾವತ್ತು ಕಳೆದುಕೊಳ್ಳಬೇಡ.

**1583 ನೇಯ ದಿನಕ್ಕೆ ಏಮ್ಸ್ ಹೋರಾಟ**

## ಯಾವುದೋ ಘಟನೆಯಿಂದ ಸ್ವಯಂ ಜೀವಹಾನಿ ಮಾಡಿಕೊಳ್ಳದೆ, ಜೀವನದ ಸುಂದರ ಕ್ಷಣಗಳನ್ನು ಅನುಭವಿಸಿ: ಡಾ. ಶರಣಬಸಪ್ಪ ಗಣಜಲಖೇಡ




ರಾಯಚೂರು: ಮನುಷ್ಯನ ಜೀವನದಲ್ಲಿ ಎದುರಾಗುವ ಸಂದಿಗ್ಧ ಹಾಗೂ ಸಂಕಷ್ಟದ ಪರಿಸ್ಥಿತಿಗಳನ್ನು ಧೈರ್ಯ, ಸಾವಧಾನ ಮತ್ತು ಶಾಂತಚಿತ್ತದಿಂದ ಎದುರಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಕ್ಷಣಿಕ ಸಮಸ್ಯೆ ಅಥವಾ ಯಾವುದೋ ಘಟನೆಯ ಕಾರಣದಿಂದ ಆತುರದ ನಿರ್ಧಾರ ತೆಗೆದುಕೊಂಡು ಸ್ವಯಂ ಜೀವಹಾನಿಗೆ ಮುಂದಾಗದೆ, ಜೀವನದ ಸುಂದರ ಕ್ಷಣಗಳನ್ನು ಅನುಭವಿಸುವತ್ತ ಪ್ರತಿಯೊಬ್ಬರೂ ಗಮನಹರಿಸಬೇಕು ಎಂದು ಕಲಬುರಗಿ ವಿಭಾಗೀಯ ಉಪನಿರ್ದೇಶಕ ಡಾ. ಶರಣಬಸಪ್ಪ ಗಣಜಲಖೇಡ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದ ಆಶ್ರಯದಲ್ಲಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ತುಂಗಾ ಭವನದಲ್ಲಿ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜೀವನದಲ್ಲಿ ಪ್ರತಿಯೊಬ್ಬರೂ ಒಂದಲ್ಲೊಂದು ಸಂದರ್ಭದಲ್ಲಿ ಸಮಸ್ಯೆ, ಒತ್ತಡ, ನಿರಾಶೆ ಹಾಗೂ ಸಂಕಷ್ಟಗಳನ್ನು ಎದುರಿಸಬೇಕಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಮನಸ್ಸಿನ ಮೇಲೆ ಉಂಟಾಗುವ ಒತ್ತಡವನ್ನು ಒಬ್ಬರೇ ಸಹಿಸಿಕೊಂಡು ಮೌನವಾಗಿರುವ ಬದಲು ಕುಟುಂಬದ ಸದಸ್ಯರು, ಬಂಧು-ಬಳಗ, ಸ್ನೇಹಿತರು ಹಾಗೂ ಹಿತೈಷಿಗಳೊಂದಿಗೆ ಹಂಚಿಕೊಳ್ಳಬೇಕು. ಸಂಕಷ್ಟದಲ್ಲಿರುವವರಿಗೆ ಸಾಂತ್ವನದ ಮಾತು, ಧೈರ್ಯ ಹಾಗೂ ಆತ್ಮಸ್ಥೈರ್ಯ ತುಂಬುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.

ಮನೆಯಲ್ಲಿನ ಸಣ್ಣಪುಟ್ಟ ಘಟನೆಗಳು, ಕುಟುಂಬದ ಭಿನ್ನಾಭಿಪ್ರಾಯಗಳು, ಕೆಲಸದ ಒತ್ತಡ, ಪರೀಕ್ಷೆಯಲ್ಲಿ ವಿಫಲತೆ, ನಿರೀಕ್ಷಿತ ಉದ್ಯೋಗ ಸಿಗದಿರುವುದು, ಉದ್ಯೋಗದಲ್ಲಿನ ಸಮಸ್ಯೆಗಳು, ಸಂಸಾರ ನಿರ್ವಹಣೆಯಲ್ಲಿನ ತೊಂದರೆ, ಸಾಲಬಾಧೆ ಸೇರಿದಂತೆ ವಿವಿಧ ಕಾರಣಗಳಿಂದ ಕೆಲವರು ಮಾನಸಿಕವಾಗಿ ಕುಗ್ಗುವ ಸಾಧ್ಯತೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಅವರ ನಡವಳಿಕೆ ಮತ್ತು ಮನಸ್ಥಿತಿಯಲ್ಲಿ ಕಂಡುಬರುವ ಬದಲಾವಣೆಗಳನ್ನು ಕುಟುಂಬದವರು ಹಾಗೂ ಹತ್ತಿರದವರು ಸಕಾಲದಲ್ಲಿಯೇ ಗುರುತಿಸಿ, ಅವರೊಂದಿಗೆ ಮುಕ್ತವಾಗಿ ಮಾತನಾಡಿ ಧೈರ್ಯ ತುಂಬಬೇಕು ಎಂದು ಹೇಳಿದರು.

ಮಾನಸಿಕ ಸಂಕಷ್ಟ ಎದುರಿಸುತ್ತಿರುವವರು ತಜ್ಞರ ಸಲಹೆ ಪಡೆಯಲು ಹಿಂಜರಿಯಬಾರದು. ಉಚಿತ ಟೆಲಿ-ಮಾನಸ್ ಸಹಾಯವಾಣಿ 14416ಕ್ಕೆ ಕರೆ ಮಾಡಿ ತಜ್ಞರಿಂದ ಅಗತ್ಯ ಸಲಹೆ ಹಾಗೂ ಮಾರ್ಗದರ್ಶನ ಪಡೆಯಬಹುದಾಗಿದೆ. ಈ ಸಹಾಯವಾಣಿ ಕುರಿತು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸಿ, ಅಗತ್ಯವಿರುವವರಿಗೆ ಮಾಹಿತಿ ತಲುಪಿಸುವ ಕೆಲಸವನ್ನು ಆರೋಗ್ಯ ಇಲಾಖೆಯ ಸಿಬ್ಬಂದಿ ಕೈಗೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಮಾತನಾಡಿ, ಮಾನಸಿಕವಾಗಿ ಸದೃಢರಾಗಿದ್ದರೆ ಜೀವನದಲ್ಲಿ ಎದುರಾಗುವ ಯಾವುದೇ ಕಠಿಣ ಪರಿಸ್ಥಿತಿಯನ್ನು ಎದುರಿಸುವ ಆತ್ಮವಿಶ್ವಾಸ ಹಾಗೂ ಛಲ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಸಂಕಷ್ಟದ ಸಂದರ್ಭದಲ್ಲಿ ಕುಟುಂಬದ ಸದಸ್ಯರ ಬೆಂಬಲ ಎಷ್ಟು ಮುಖ್ಯವೋ, ವೈದ್ಯರು ಹಾಗೂ ಮನೋವೈದ್ಯರೊಂದಿಗೆ ಆಪ್ತ ಸಮಾಲೋಚನೆ ನಡೆಸುವುದು ಕೂಡ ಅಷ್ಟೇ ಮುಖ್ಯವಾಗಿದೆ ಎಂದರು.

ಮಾನಸಿಕ ಸಮಸ್ಯೆಗಳು ಕೂಡ ಇತರ ಆರೋಗ್ಯ ಸಮಸ್ಯೆಗಳಂತೆಯೇ ಆಗಿದ್ದು, ಅವುಗಳನ್ನು ಮರೆಮಾಚುವ ಅಥವಾ ಸಂಕೋಚಪಡುವ ಅಗತ್ಯವಿಲ್ಲ. ಸರಿಯಾದ ಸಮಯದಲ್ಲಿ ತಜ್ಞರ ಸಲಹೆ ಮತ್ತು ಅಗತ್ಯವಿದ್ದಲ್ಲಿ ಸೂಕ್ತ ಚಿಕಿತ್ಸೆ ಪಡೆದುಕೊಂಡರೆ ಸಮಸ್ಯೆಯಿಂದ ಹೊರಬರಲು ಸಾಧ್ಯವಾಗುತ್ತದೆ. ಕುಟುಂಬದ ಸದಸ್ಯರು ಮಾನಸಿಕವಾಗಿ ಸಂಕಷ್ಟದಲ್ಲಿರುವ ವ್ಯಕ್ತಿಯನ್ನು ನಿರ್ಲಕ್ಷಿಸದೆ ಅವರ ಮಾತು ಆಲಿಸಿ, ಅವರ ಭಾವನೆಗಳಿಗೆ ಸ್ಪಂದಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಮನೋರೋಗ ತಜ್ಞರ ನೇತೃತ್ವದ ವೈದ್ಯಕೀಯ ತಂಡವು ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ಮಾನಸಿಕ ಆರೋಗ್ಯ ಸೇವೆ ಒದಗಿಸುತ್ತಿದೆ. ದೇವದುರ್ಗ ಸಾರ್ವಜನಿಕ ಆಸ್ಪತ್ರೆಗೆ ಪ್ರತಿ ತಿಂಗಳ ಮೊದಲ ಮಂಗಳವಾರ, ಲಿಂಗಸುಗೂರು ಸಾರ್ವಜನಿಕ ಆಸ್ಪತ್ರೆಗೆ ಎರಡನೇ ಮಂಗಳವಾರ, ಸಿಂಧನೂರು ಸಾರ್ವಜನಿಕ ಆಸ್ಪತ್ರೆಗೆ ಮೂರನೇ ಮಂಗಳವಾರ ಹಾಗೂ ಮಾನವಿ ಸಾರ್ವಜನಿಕ ಆಸ್ಪತ್ರೆಗೆ ನಾಲ್ಕನೇ ಮಂಗಳವಾರ ವೈದ್ಯಕೀಯ ತಂಡ ಭೇಟಿ ನೀಡುತ್ತದೆ ಎಂದು ತಿಳಿಸಿದರು.

ಅದೇ ರೀತಿ ಪ್ರತಿ ತಿಂಗಳ ಎರಡನೇ ಶುಕ್ರವಾರ ರಾಯಚೂರು ನಗರದ ಜಹೀರಾಬಾದ್ ಪ್ರದೇಶದಲ್ಲಿ ಹಾಗೂ ನಾಲ್ಕನೇ ಶುಕ್ರವಾರ ಗ್ರಾಮೀಣ ಭಾಗದ ಆಯ್ದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮನೋರೋಗ ತಜ್ಞರು ಮತ್ತು ವೈದ್ಯಕೀಯ ತಂಡ ಭೇಟಿ ನೀಡಿ ಅಗತ್ಯ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಚಿಕಿತ್ಸೆ ಒದಗಿಸುತ್ತಿದ್ದಾರೆ. ಸಾರ್ವಜನಿಕರು ಈ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕು. ಆರೋಗ್ಯ ಸಿಬ್ಬಂದಿ ಈ ಸೇವೆಗಳ ಕುರಿತು ಜನರಿಗೆ ವ್ಯಾಪಕ ಮಾಹಿತಿ ನೀಡಬೇಕು ಎಂದು ಹೇಳಿದರು.

ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದಡಿ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿಯೂ ಮಾನಸಿಕ ಆರೋಗ್ಯ ಹಾಗೂ ಮೆದುಳು ಆರೋಗ್ಯಕ್ಕೆ ಸಂಬಂಧಿಸಿದ ತಜ್ಞರ ಸೇವೆ ಮತ್ತು ಚಿಕಿತ್ಸಾ ಸೌಲಭ್ಯಗಳು ಲಭ್ಯವಿದ್ದು, ಅಗತ್ಯವಿರುವವರು ಈ ಸೌಲಭ್ಯವನ್ನು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಸಮುದಾಯ ಮಟ್ಟದಲ್ಲಿ ಆತ್ಮಹತ್ಯೆ ತಡೆ ಹಾಗೂ ಮಾನಸಿಕ ಆರೋಗ್ಯದ ಕುರಿತು ಮುಕ್ತವಾಗಿ ಮಾತನಾಡುವ ವಾತಾವರಣ ನಿರ್ಮಾಣವಾಗಬೇಕು. ಮಾನಸಿಕ ಒತ್ತಡ, ಭಾವನಾತ್ಮಕ ಯಾತನೆ ಅಥವಾ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿರುವ ವ್ಯಕ್ತಿಗಳನ್ನು ಅನುಮಾನ, ತಿರಸ್ಕಾರ ಅಥವಾ ಕಳಂಕದ ದೃಷ್ಟಿಯಿಂದ ನೋಡುವ ಬದಲು ಸಹಾನುಭೂತಿ ಹಾಗೂ ಮಾನವೀಯತೆಯಿಂದ ಕಾಣಬೇಕು ಎಂದು ತಿಳಿಸಿದರು.

ಮಾನಸಿಕ ಸಂಕಷ್ಟ ಅನುಭವಿಸುತ್ತಿರುವವರು ತಮ್ಮ ಸಮಸ್ಯೆಗಳನ್ನು ಹೇಳಿಕೊಂಡಾಗ ಅದನ್ನು ಲಘುವಾಗಿ ಪರಿಗಣಿಸಬಾರದು. ಬದಲಾಗಿ ಅವರ ಮಾತುಗಳನ್ನು ತಾಳ್ಮೆಯಿಂದ ಆಲಿಸಿ, ಸೂಕ್ತ ಸಲಹೆ ಮತ್ತು ಚಿಕಿತ್ಸೆ ಪಡೆಯುವಂತೆ ಪ್ರೋತ್ಸಾಹಿಸಬೇಕು. ಆತ್ಮಹತ್ಯೆ ಪ್ರಯತ್ನದಿಂದ ಬದುಕುಳಿದವರನ್ನು ದೂಷಿಸುವುದು, ಅವಮಾನಿಸುವುದು, ಕಳಂಕಿಸುವುದು ಅಥವಾ ತಾರತಮ್ಯ ಮಾಡುವುದು ಸರಿಯಲ್ಲ. ಅವರಿಗೆ ಕುಟುಂಬ ಮತ್ತು ಸಮಾಜದಿಂದ ಹೆಚ್ಚಿನ ಆತ್ಮಸ್ಥೈರ್ಯ ಹಾಗೂ ಬೆಂಬಲ ನೀಡಬೇಕಾಗಿದೆ ಎಂದು ಹೇಳಿದರು.

ಜೀವನದಲ್ಲಿ ಎದುರಾಗುವ ಸಮಸ್ಯೆಗಳು ಶಾಶ್ವತವಲ್ಲ. ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಹಲವು ಮಾರ್ಗಗಳು ಇವೆ. ಒಂದು ಕ್ಷಣದ ನಿರಾಶೆಯಿಂದ ಜೀವನವನ್ನು ಕೊನೆಗೊಳಿಸುವಂತಹ ನಿರ್ಧಾರಕ್ಕೆ ಮುಂದಾಗದೆ, ವಿಶ್ವಾಸಾರ್ಹ ವ್ಯಕ್ತಿಗಳೊಂದಿಗೆ ಮಾತನಾಡುವುದು, ಕುಟುಂಬದ ಬೆಂಬಲ ಪಡೆಯುವುದು ಹಾಗೂ ಅಗತ್ಯವಿದ್ದಲ್ಲಿ ವೈದ್ಯಕೀಯ ತಜ್ಞರ ನೆರವು ಪಡೆಯುವುದು ಅತ್ಯಂತ ಮುಖ್ಯ ಎಂದು ಕಾರ್ಯಕ್ರಮದಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮಾಧಿಕಾರಿ ಡಾ. ಶಿವಕುಮಾರ್ ನಾರಾ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಯಶೋಧಾ, ಡಿವಿಬಿಡಿಸಿಪಿ ಅಧಿಕಾರಿ ಡಾ. ಚಂದ್ರಶೇಖರಯ್ಯ, ಮನೋರೋಗ ತಜ್ಞ ಡಾ. ಮನೋಹರ ಪತ್ತಾರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಎಚ್. ದಾಸಪ್ಪನವರ, ಜಿಲ್ಲಾ ಹಿರಿಯ ಆರೋಗ್ಯ ಮೇಲ್ವಿಚಾರಕ ಪುಂಡಲೀಕ ಗಂಜಿ, ಡಿಪಿಎಂ ನವೀನ್ ಕುಮಾ್ರ, ಎನ್‌ಸಿಡಿ ಡಿಪಿಸಿ ಡಾ. ಮೇಘಾರೆಡ್ಡಿ, ಎಪಿಡೆಮಿಯಾಲಜಿಸ್ಟ್ ಶ್ರೀನಿವಾಸ್, ಆರ್‌ಕೆಎಸ್‌ಕೆ ಕೋ-ಆರ್ಡಿನೇಟರ್ ಜ್ಯೋತಿ, ಹಿರಿಯ ಎಚ್‌ಐಒ ಸೂಗುರಪ್ಪ, ಮೋಹಿನುದ್ದಿನ್ ಪಾಶಾ, ಹಿರೇಮಠ, ಶರಣಬಸವ, ತಂಗಮ್ಮ, ಮಹಮ್ಮದ್ ಅಲಿ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

## ಜಿಲ್ಲಾ ಕಾಂಗ್ರೆಸ್ ನೂತನ ಅಧ್ಯಕ್ಷ ಕೆ. ಶಾಂತಪ್ಪರಿಗೆ ಬೆಂಗಳೂರಿನಲ್ಲಿ ಶುಭಾಶಯ

ಜವಾಬ್ದಾರಿಯಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುವಂತೆ ಶುಭ ಹಾರೈಸಿದರು. ಜಿಲ್ಲಾ ಅಧ್ಯಕ್ಷರಾಗಿ ಪಕ್ಷದ ಸಂಘಟನೆ, ಕಾರ್ಯಕರ್ತರ ಸಮನ್ವಯ ಹಾಗೂ ಜನಸಂಪರ್ಕ ಚಟುವಟಿಕೆಗಳಿಗೆ ಹೆಚ್ಚಿನ ಒತ್ತು ನೀಡುವ ನಿರೀಕ್ಷೆ ವ್ಯಕ್ತಪಡಿಸಲಾಯಿತು.

ಈ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ್, ಮಸ್ಕಿ ಶಾಸಕ ಬಸನಗೌಡ ತುರುವಿಹಾಳ, ಮಾಜಿ ಶಾಸಕ ಡಿ.ಎಸ್. ಹೂಲಗೇರಿ, ಕಾಂಗ್ರೆಸ್ ಮುಖಂಡರಾದ ಮಹಮ್ಮದ್ ಶಾಲಂ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ್, ಜಯವಂತರಾವ್ ಪತಂಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

## ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ

ನೀಡುವುದರ ಜೊತೆಗೆ ಯುವಕರು, ಮಹಿಳೆಯರು ಹಾಗೂ ಹೊಸ ಕಾರ್ಯಕರ್ತರಿಗೆ ಹೆಚ್ಚಿನ ಅವಕಾಶ ಕಲ್ಪಿಸಿ ಸಂಘಟನೆಯನ್ನು ವಿಸ್ತರಿಸಬೇಕು ಎಂದು ಸಲಹೆ ನೀಡಿದರು.

ರಾಜ್ಯ ಸರ್ಕಾರ ಜಾರಿಗೊಳಿಸುತ್ತಿರುವ ಜನಪರ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಜನರಿಗೆ ಸಮರ್ಪಕ ಮಾಹಿತಿ ತಲುಪಿಸಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಪಕ್ಷ ಮತ್ತು ಜನರ ನಡುವಿನ ಸಂಪರ್ಕವನ್ನು ಮತ್ತಷ್ಟು ಗಟ್ಟಿಗೊಳಿಸಬೇಕು. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಗೆ ಅವಕಾಶ ನೀಡದೆ ಸಂಘಟನೆಯ ಹಿತದೃಷ್ಟಿಯಿಂದ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನವು ಮಹತ್ವದ ಜವಾಬ್ದಾರಿಯಾಗಿದ್ದು, ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳ ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಪಕ್ಷದ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಸಂಘಟಿಸಬೇಕು. ಪಕ್ಷವನ್ನು ತಳಮಟ್ಟದಿಂದ ಇನ್ನಷ್ಟು ಬಲಪಡಿಸುವ ಮೂಲಕ ಮುಂದಿನ ದಿನಗಳಲ್ಲಿ ಸಂಘಟನೆಗೆ ಹೊಸ ಚೈತನ್ಯ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಭ ಹಾರೈಸಿದರು.

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೆ. ಶಾಂತಪ್ಪ ಅವರಿಗೆ ಶುಭ ಕೋರಿ, ಕಾಂಗ್ರೆಸ್ ಪಕ್ಷದ ಸಂಘಟನೆಗೆ ಕಾರ್ಯಕರ್ತರೇ ಬೆನ್ನೆಲುಬಾಗಿದ್ದು, ಪ್ರತಿಯೊಬ್ಬ ಕಾರ್ಯಕರ್ತರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನಡೆಯಬೇಕು. ಪಕ್ಷದ ಸಿದ್ಧಾಂತ, ಸಾಮಾಜಿಕ ನ್ಯಾಯ ಮತ್ತು ಜನಪರ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಕೆ. ಶಾಂತಪ್ಪ ಅವರು ತಮ್ಮ ಮೇಲೆ ವಿಶ್ವಾಸವಿಟ್ಟು ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರ ಜವಾಬ್ದಾರಿ ನೀಡಿರುವ ಪಕ್ಷದ ವರಿಷ್ಠರು ಹಾಗೂ ಹಿರಿಯ ನಾಯಕರಿಗೆ ಕೃತಜ್ಞತೆ ಸಲ್ಲಿಸಿದರು. ಜಿಲ್ಲೆಯ ಎಲ್ಲ ಹಿರಿಯ ಮುಖಂಡರು, ಜನಪ್ರತಿನಿಧಿಗಳು ಹಾಗೂ ಕಾರ್ಯಕರ್ತರ ಮಾರ್ಗದರ್ಶನ ಮತ್ತು ಸಹಕಾರ ಪಡೆದುಕೊಂಡು ಪಕ್ಷವನ್ನು ಇನ್ನಷ್ಟು ಸಂಘಟಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು.

ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರಿಗೂ ಸಮಾನ ಗೌರವ ನೀಡಿ, ಎಲ್ಲರ ಅಭಿಪ್ರಾಯಗಳನ್ನು ಆಲಿಸಿಕೊಂಡು ಒಗ್ಗಟ್ಟಿನಿಂದ ಪಕ್ಷವನ್ನು ಮುನ್ನಡೆಸಲಾಗುವುದು. ಜಿಲ್ಲೆಯ ಪ್ರತಿಯೊಂದು ತಾಲೂಕು, ಹೋಬಳಿ, ಗ್ರಾಮ ಹಾಗೂ ವಾರ್ಡ್ ಮಟ್ಟದಲ್ಲಿ ಸಂಘಟನೆಯನ್ನು ಬಲಪಡಿಸಲು ಆದ್ಯತೆ ನೀಡಲಾಗುವುದು. ಸರ್ಕಾರದ ಜನಪರ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವ ಜೊತೆಗೆ ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಸೇತುವೆಯಾಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯನಿರ್ವಹಿಸಲಿದೆ ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ್, ಮಸ್ಕಿ ಶಾಸಕ ಬಸನಗೌಡ ತುರುವಿಹಾಳ, ಮಾಜಿ ಶಾಸಕ ಡಿ.ಎಸ್. ಹೂಲಗೇರಿ, ಕಾಂಗ್ರೆಸ್ ಮುಖಂಡರಾದ ಮಹಮ್ಮದ್ ಶಾಲಂ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ್, ಜಯವಂತರಾವ್ ಪತಂಗೆ ಸೇರಿದಂತೆ ಪಕ್ಷದ ಅನೇಕ ಮುಖಂಡರು ಉಪಸ್ಥಿತರಿದ್ದು, ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಅವರಿಗೆ ಶುಭ ಹಾರೈಸಿದರು.

## ಗಣೇಶೋತ್ಸವ ಶಾಂತಿಯುತವಾಗಿ ಆಚರಿಸಿ: ಎಸ್‌ಪಿ ಅರುಣಾಂಗ್ಷು ಗಿರಿ

ಕಾರ್ಯಕ್ರಮದ ಅವಧಿಯಲ್ಲಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಗಣೇಶೋತ್ಸವದ ವೇಳೆ ಯಾವುದೇ ರೀತಿಯ ಗಲಾಟೆ, ಅನಗತ್ಯ ವಾಗ್ವಾದ, ಪ್ರಚೋದನಕಾರಿ ವರ್ತನೆ ಹಾಗೂ ಸಾರ್ವಜನಿಕ ಶಾಂತಿಗೆ ಭಂಗ ತರುವ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಎಲ್ಲ ಸಮುದಾಯಗಳ ಧಾರ್ಮಿಕ ಭಾವನೆಗಳಿಗೆ ಗೌರವ ನೀಡಿ ಪರಸ್ಪರ ಸಹೋದರತ್ವ ಮತ್ತು ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸಬೇಕು ಎಂದು ಸಲಹೆ ನೀಡಿದರು.

ಗಣೇಶ ಮೂರ್ತಿಗಳ ಮೆರವಣಿಗೆ ಹಾಗೂ ವಿಸರ್ಜನೆಯ ಸಂದರ್ಭದಲ್ಲಿ ನಿಗದಿಪಡಿಸಲಾದ ಮಾರ್ಗಗಳನ್ನು ಅನುಸರಿಸಬೇಕು. ಪೊಲೀಸ್ ಇಲಾಖೆಯೊಂದಿಗೆ ಮಂಡಳಿಯವರು ನಿರಂತರ ಸಂಪರ್ಕದಲ್ಲಿದ್ದು, ಯಾವುದೇ ಸಮಸ್ಯೆ ಅಥವಾ ಅನುಮಾನಾಸ್ಪದ ಚಟುವಟಿಕೆ ಕಂಡುಬಂದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು. ಯುವಕರು ಉತ್ಸಾಹದ ಜೊತೆಗೆ ಶಿಸ್ತು ಮತ್ತು ಹೊಣೆಗಾರಿಕೆಯಿಂದ ವರ್ತಿಸಬೇಕು ಎಂದು ತಿಳಿಸಿದರು.

ಧ್ವನಿವರ್ಧಕಗಳ ಬಳಕೆಗೆ ಸಂಬಂಧಿಸಿದಂತೆ ಸರ್ಕಾರ ಹಾಗೂ ನ್ಯಾಯಾಲಯದ ಮಾರ್ಗಸೂಚಿಗಳನ್ನು ಪಾಲಿಸಬೇಕು. ನಿಗದಿತ ಸಮಯದೊಳಗೆ ಮಾತ್ರ ಧ್ವನಿವರ್ಧಕಗಳನ್ನು ಬಳಸಬೇಕು. ಅತಿಯಾದ ಶಬ್ದದಿಂದ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ, ವೃದ್ಧರಿಗೆ ಹಾಗೂ ರೋಗಿಗಳಿಗೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಲಾಯಿತು.

ಮೆರವಣಿಗೆ ಸಂದರ್ಭದಲ್ಲಿ ಸಂಚಾರ ವ್ಯವಸ್ಥೆಗೆ ಅಡ್ಡಿಯಾಗದಂತೆ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು. ರಸ್ತೆಗಳ ಮಧ್ಯೆ ವಾಹನಗಳನ್ನು ನಿಲ್ಲಿಸುವುದು, ಸಾರ್ವಜನಿಕ ಸಂಚಾರಕ್ಕೆ ತೊಂದರೆ ಉಂಟುಮಾಡುವುದು ಹಾಗೂ ನಿಯಮಬಾಹಿರವಾಗಿ ಕಾರ್ಯಕ್ರಮಗಳನ್ನು ನಡೆಸುವುದನ್ನು ತಪ್ಪಿಸಬೇಕು ಎಂದು ತಿಳಿಸಲಾಯಿತು.

ಗಣೇಶೋತ್ಸವದ ಸಂದರ್ಭದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದು ಕೇವಲ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ, ಗಣೇಶ ಮಂಡಳಿಗಳ ಪದಾಧಿಕಾರಿಗಳು, ಸದಸ್ಯರು ಹಾಗೂ ಸಾರ್ವಜನಿಕರ ಸಹಕಾರವೂ ಅತ್ಯಂತ ಮುಖ್ಯವಾಗಿದೆ. ಪ್ರತಿಯೊಬ್ಬರೂ ಜವಾಬ್ದಾರಿಯಿಂದ ನಡೆದುಕೊಂಡರೆ ಹಬ್ಬವನ್ನು ಯಾವುದೇ ಅಹಿತಕರ ಘಟನೆಗಳಿಲ್ಲದೆ ಯಶಸ್ವಿಯಾಗಿ ಆಚರಿಸಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ಹೇಳಿದರು.

ಶಕ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಣೇಶೋತ್ಸವದ ಅವಧಿಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗುವುದು. ಸಾರ್ವಜನಿಕರು ಹಾಗೂ ಗಣೇಶ ಮಂಡಳಿಗಳ ಸದಸ್ಯರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಿ ಹಬ್ಬವನ್ನು ಶಾಂತಿ, ಭಕ್ತಿ, ಸೌಹಾರ್ದತೆ ಮತ್ತು ಸಂಭ್ರಮದಿಂದ ಆಚರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಶಕ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಯ ವಿವಿಧ ಗಣೇಶ ಮಂಡಳಿಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು, ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

## ಗಣೇಶ ವಿಸರ್ಜನೆ ಹಿನ್ನಲೆಯಲ್ಲಿ ಮಧ್ಯ ಮಾರಾಟ ನಿಷೇಧ: ಜಿಲ್ಲಾಧಿಕಾರಿ ಪೂವಿತಾ ಎಸ್

18-09-2026 ರಂದು (5ನೇ ದಿನ ಗಣೇಶ ವಿಸರ್ಜನೆ) ದಿನಾಂಕ:18-09-2026 ರಂದು ಬೆಳಿಗ್ಗೆ 06ಗಂಟೆಯಿದ ದಿನಾಂಕ:19-09-2026 ಬೆಳಿಗ್ಗೆ 06ಗಂಟೆಯವರೆಗೆ

ದಿನಾಕ:20-09-2026 ರಂದು (7ನೇ ದಿನ ಗಣೇಶ ವಿಸರ್ಜನೆ) ದಿನಾಂಕ:20-09-2026 ರಂದು ಬೆಳಿಗ್ಗೆ 06ಗಂಟೆಯಿದ ದಿನಾಂಕ:21-09-2026 ಬೆಳಿಗ್ಗೆ 06ಗಂಟೆಯವರೆಗೆ

ದಿನಾಕ:22-09-2026 ರಂದು (9ನೇ ದಿನ ಗಣೇಶ ವಿಸರ್ಜನೆ) ದಿನಾಂಕ:22-09-2026 ರಂದು ಬೆಳಿಗ್ಗೆ 06ಗಂಟೆಯಿದ ದಿನಾಂಕ:23-09-2026 ಬೆಳಿಗ್ಗೆ 06ಗಂಟೆಯವರೆಗೆ

ರಾಯಚೂರು ಮಹಾನಗೆರ ಪಾಲಿಕೆ ವ್ಯಾಪ್ತಿಯಲ್ಲಿ ಮಾತ್ರ ಮಧ್ಯ ಮಾರಾಟ ಸಾಗಾಣಿಕೆ ನಿಷೇಧ ದಿನಾಂಕ, ಪ್ರದೇಶ ಮತ್ತು ಅವಧಿ ದಿನಾಂಕ:04-10-2026 ರಂದು (21ನೇ ದಿನದ ಗಣೇಶ ವಿಸರ್ಜನೆ) ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಾತ್ರ ದಿನಾಂಕ:04-10-2026 ರಂದು ಬೆಳಿಗ್ಗೆ 06ಗಂಟೆಯಿದ ದಿನಾಂಕ:05-10-2026 ಬೆಳಿಗ್ಗೆ 06ಗಂಟೆಯವರೆಗೆ ಈ ಮೇಲಿನ ನಿಗದಿತ ದಿನಾಂಕಗಳದು ಮಧ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

## ವಿಕಸಿತ ಭಾರತ ಅಭಿಯಾನ ಯುವಕ, ಯುವತಿಯರು ಭಾಗವಹಿಸಲು ಸ್ವಾತಿ ಗುಗುಲೋತ್ ಕರೆ

ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿ, ಸಕ್ರಿಯವಾಗಿ ಭಾಗವಹಿಸುವಂತೆ ಪ್ರೇರೇಪಿಸಲಾಗುತ್ತಿದೆ. ವಿಕಸಿತ ಭಾರತ ರಸಪ್ರಶ್ನೆಯು ಭಾರತದ ಸಾಧನೆಗಳು, ಸಾಂಸ್ಕೃತಿಕ ಪರಂಪರೆ, ಸಂವಿಧಾನಿಕ ಮೌಲ್ಯಗಳು ಹಾಗೂ ಅಭಿವೃದ್ಧಿ ಕುರಿತ ಜ್ಞಾನವನ್ನು ಹೆಚ್ಚಿಸುವ ವೇದಿಕೆಯಾಗಿದೆ.

15ರಿಂದ 29 ವರ್ಷದೊಳಗಿನ ಅರ್ಹ ಯುವಕರು ಭಾಗವಹಿಸಬಹುದಾಗಿದೆ. ಥಿಚಿಡಿಬಿಣ..ಟಿ ಪೋರ್ಟಲ್‌ನಲ್ಲಿ ಯುವ ಪ್ರೊಫೈಲ್ ರಚಿಸಿ, ಕರ್ನಾಟಕ ಹಾಗೂ ರಾಯಚೂರು ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡು ರಸಪ್ರಶ್ನೆಯಲ್ಲಿ ಭಾಗವಹಿಸಲು ಅವಕಾಶವಿದೆ.

ಈ ಕಾರ್ಯಕ್ರಮದ ಮೂಲಕ ಯುವಕರಿಗೆ ತಮ್ಮ ಆಲೋಚನೆಗಳನ್ನು ವ್ಯಕ್ತಪಡಿಸಲು, ನಾಯಕತ್ವ ಹಾಗೂ ಪ್ರಸ್ತುತ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಮತ್ತು ರಾಷ್ಟ್ರಮಟ್ಟದ ಚರ್ಚೆಗಳಲ್ಲಿ ಭಾಗವಹಿಸಲು ಅವಕಾಶ ದೊರೆಯಲಿದೆ. ಜಿಲ್ಲೆಯ ಪ್ರತಿಯೊಬ್ಬ ಅರ್ಹ ಯುವಕ-ಯುವತಿಯರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು. ಹಾಗಾಗಿ ಜಿಲ್ಲೆಯ ಎಲ್ಲಾ ಯುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಲು ಕರೆ ನೀಡಿದರು.

ಈ ವೇಳೆ ಮೇರಾ ಯುವ ಭಾರತ್ ವಿಕಸಿತ ಭಾರತ್ ರಸಪ್ರಶ್ನೆ ಸ್ಪರ್ಧೆಯ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಲಾಯಿತು.

ಈ ವೇಳೆ ಪತ್ರಿಕಾಗೋಷ್ಠಿಯಲ್ಲಿ ರಾಯಚೂರು ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಎನ್.ಎಸ್.ಎಸ್. ಕಾರ್ಯಕ್ರಮ ಅಧಿಕಾರಿ ಡಾ.ಸಂತೋಷ ಕುಮಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುರೇಶ ಜಿ., ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ: ಪದವಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ

ರಾಯಚೂರು, ಸೆ.11: ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ಮಾಧ್ಯಮಗಳು ಮತ್ತು ಪ್ರಜಾಪ್ರಭುತ್ವ: ಇಂದಿನ ಸವಾಲುಗಳು ಹಾಗೂ ನೈತಿಕತೆ ವಿಷಯದ ಕುರಿತು ಪ್ರಬಂಧ ಸ್ಪರ್ಧೆಯನ್ನು ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಲಾಯಿತು.



ಕಾರ್ಯಕ್ರಮವನ್ನು ಹಿರಿಯ ಪತ್ರಕರ್ತ ದತ್ತು ಸರ್ಕಿಲ್ ಉದ್ಘಾಟಿಸಿದರು. ವಿವಿಧ ಪದವಿ ಕಾಲೇಜುಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳು ಪ್ರಬಂಧ ಸ್ಪರ್ಧೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡು, ಮಾಧ್ಯಮಗಳ ಪಾತ್ರ, ಪ್ರಜಾಪ್ರಭುತ್ವದ ಬಲವರ್ಧನೆ, ಇಂದಿನ ಮಾಧ್ಯಮ ಕ್ಷೇತ್ರ ಎದುರಿಸುತ್ತಿರುವ ಸವಾಲುಗಳು, ಪತ್ರಿಕೋದ್ಯಮದ ನೈತಿಕತೆ ಹಾಗೂ ಸಮಾಜದ ಮೇಲಿನ ಮಾಧ್ಯಮಗಳ ಜವಾಬ್ದಾರಿ ಕುರಿತು ತಮ್ಮ ಅಭಿಪ್ರಾಯಗಳನ್ನು ಬರಹದ ಮೂಲಕ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ್, ವಿದ್ಯಾರ್ಥಿಗಳಲ್ಲಿ ಭಾಷಾ ಕೌಶಲ್ಯ, ಚಿಂತನಾ ಶಕ್ತಿ ಹಾಗೂ ಬರವಣಿಗೆ ಸಾಮರ್ಥ್ಯ ವೃದ್ಧಿಸಲು ಪ್ರಬಂಧ ಸ್ಪರ್ಧೆಗಳು ಅತ್ಯಂತ ಪರಿಣಾಮಕಾರಿ ವೇದಿಕೆಯಾಗಿವೆ ಎಂದು ಹೇಳಿದರು.

ಯಾವುದೇ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆಯುವುದೊಂದೇ ಮುಖ್ಯವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವುದು, ವಿಷಯದ ಕುರಿತು ಅಧ್ಯಯನ ಮಾಡುವುದು, ತಮ್ಮ ಆಲೋಚನೆಗಳನ್ನು ಕ್ರಮಬದ್ಧವಾಗಿ ಬರಹ ರೂಪದಲ್ಲಿ ಮಂಡಿಸುವ ಅನುಭವವೇ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಹಾಗೂ ವೃತ್ತಿ ಜೀವನಕ್ಕೆ ಬಹಳ ಉಪಯುಕ್ತವಾಗುತ್ತದೆ. ಸೋಲು-ಗೆಲುವಿಗಿಂತ ಕಲಿಕೆಯ ಮನೋಭಾವ ಮುಖ್ಯ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಯಾವುದಾದರೂ ವಿಷಯದ ಬಗ್ಗೆ ಬರೆಯುವ ಮೊದಲು ಅದರ ಹಿನ್ನೆಲೆ, ಪ್ರಸ್ತುತತೆ ಹಾಗೂ ಸಾಮಾಜಿಕ ಪರಿಣಾಮಗಳನ್ನು ಅರ್ಥಮಾಡಿಕೊಳ್ಳಬೇಕು. ವಿಷಯವನ್ನು ಮೇಲ್ನೋಟಕ್ಕೆ ತಿಳಿದುಕೊಳ್ಳುವುದಕ್ಕಿಂತ ಅದರ ಆಳಕ್ಕೆ ಇಳಿದು ವಿಚಾರಿಸುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು. ಇಂತಹ ಸ್ಪರ್ಧೆಗಳು ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ, ಮಾಹಿತಿ ಸಂಗ್ರಹಿಸುವ ಸಾಮರ್ಥ್ಯ ಮತ್ತು ವಿಶ್ಲೇಷಣಾತ್ಮಕ ಚಿಂತನೆ ಬೆಳೆಸಲು ಸಹಕಾರಿಯಾಗುತ್ತವೆ ಎಂದರು.

ಮಾಧ್ಯಮಗಳು ಪ್ರಜಾಪ್ರಭುತ್ವದ ಪ್ರಮುಖ ಅಂಗವಾಗಿದ್ದು, ಸಮಾಜದ ವಿವಿಧ ವರ್ಗಗಳ ಧ್ವನಿಯನ್ನು ಆಡಳಿತದವರೆಗೆ ತಲುಪಿಸುವ ಮಹತ್ವದ ಜವಾಬ್ದಾರಿಯನ್ನು ಹೊತ್ತುಕೊಂಡಿವೆ. ಇದೇ ಸಂದರ್ಭದಲ್ಲಿ ಮಾಧ್ಯಮಗಳ ನೈತಿಕತೆ, ಸತ್ಯಾಸತ್ಯತೆ, ಜವಾಬ್ದಾರಿ ಮತ್ತು ವಿಶ್ವಾಸಾರ್ಹತೆಯ ಕುರಿತು ಯುವ ಸಮುದಾಯ ಏನು ಯೋಚಿಸುತ್ತಿದೆ ಎಂಬುದನ್ನು ಅರಿಯಲು ಇಂತಹ ಸ್ಪರ್ಧೆಗಳು ನೆರವಾಗುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ವಿಜಯ ಕರ್ನಾಟಕದ ಹಿರಿಯ ವರದಿಗಾರ ಹಾಗೂ ರಿಪೋರ್ಟರ್ಸ್ ಗಿಲ್ಡ್ ಸದಸ್ಯ ಮಂಜುನಾಥ ಸಾಲಿ ಮಾತನಾಡಿ, ಇಂದಿನ ವಿದ್ಯಾರ್ಥಿ ಹಾಗೂ ಯುವ ಸಮುದಾಯ ಮಾಧ್ಯಮಗಳನ್ನು ಯಾವ ದೃಷ್ಟಿಕೋನದಿಂದ ನೋಡುತ್ತಿದೆ, ಮಾಧ್ಯಮಗಳಿಂದ ಅವರ ನಿರೀಕ್ಷೆಗಳೇನು, ಮಾಧ್ಯಮಗಳ ಕಾರ್ಯವೈಖರಿಯ ಕುರಿತು ಅವರಲ್ಲಿ ಯಾವ ರೀತಿಯ ಅಭಿಪ್ರಾಯಗಳಿವೆ ಎಂಬುದನ್ನು ತಿಳಿದುಕೊಳ್ಳಲು ಈ ಪ್ರಬಂಧ ಸ್ಪರ್ಧೆ ಒಂದು ಉತ್ತಮ ಅವಕಾಶವಾಗಿದೆ ಎಂದರು.

ಇಂದಿನ ಯುವಜನತೆಗೆ ತಮ್ಮ ಭಾವನೆಗಳು, ಅಭಿಪ್ರಾಯಗಳು ಮತ್ತು ಅನಿಸಿಕೆಗಳನ್ನು ಹಂಚಿಕೊಳ್ಳಲು ಹಲವು ವೇದಿಕೆಗಳು ಲಭ್ಯವಿದ್ದರೂ, ಅನೇಕರು ತಮ್ಮ ವಿಚಾರಗಳನ್ನು ಮುಕ್ತವಾಗಿ ವ್ಯಕ್ತಪಡಿಸಲು ಹಿಂದೇಟು ಹಾಕುತ್ತಿದ್ದಾರೆ. ಬರವಣಿಗೆಯ ಮೂಲಕ ತಮ್ಮ ವಿಚಾರಗಳನ್ನು ಸ್ಪಷ್ಟವಾಗಿ ಅಭಿವ್ಯಕ್ತಿಸುವುದು ಒಂದು ಮಹತ್ವದ ಕೌಶಲ್ಯವಾಗಿದ್ದು, ವಿದ್ಯಾರ್ಥಿಗಳು ಅದನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜದ ವಿವಿಧ ಘಟನೆಗಳನ್ನು ಗಮನಿಸುವುದು, ಅವುಗಳ ಬಗ್ಗೆ ಪ್ರಶ್ನಿಸುವುದು ಮತ್ತು ತಮ್ಮದೇ ಆದ ಅಭಿಪ್ರಾಯ ರೂಪಿಸಿಕೊಳ್ಳುವುದು ಯುವಜನರ ಜವಾಬ್ದಾರಿಯೂ ಆಗಿದೆ. ಪ್ರಬಂಧ ಸ್ಪರ್ಧೆಗಳಂತಹ ವೇದಿಕೆಗಳು ವಿದ್ಯಾರ್ಥಿಗಳ ಆತ್ಮವಿಶ್ವಾಸವನ್ನು ಹೆಚ್ಚಿಸುವುದರ ಜೊತೆಗೆ ಅವರ ಚಿಂತನೆಗೆ ಹೊಸ ಆಯಾಮ ನೀಡುತ್ತವೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ್ ಜಾಗಟಗಲ್, ಗಿಲ್ಡ್ ತನ್ನ 25 ವರ್ಷಗಳ ಸಾರ್ಥಕ ಪಯಣವನ್ನು ಪೂರ್ಣಗೊಳಿಸಿ ಬೆಳ್ಳಿ ಮಹೋತ್ಸವ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಈ ಸಂದರ್ಭದಲ್ಲಿ ಪತ್ರಿಕೋದ್ಯಮದ ಜೊತೆಗೆ ವಿದ್ಯಾರ್ಥಿ ಮತ್ತು ಯುವ ಸಮುದಾಯವನ್ನು ಸಂಪರ್ಕಿಸುವ ಉದ್ದೇಶದಿಂದ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ವಿಶೇಷವಾಗಿ ಜೆನ್‌ಜಿ ಸಮುದಾಯವು ಇಂದಿನ ಮಾಧ್ಯಮಗಳನ್ನು ಯಾವ ರೀತಿಯಲ್ಲಿ ನೋಡುತ್ತಿದೆ, ಸುದ್ದಿಗಳ ವಿಶ್ವಾಸಾರ್ಹತೆ, ಸಾಮಾಜಿಕ ಜಾಲತಾಣಗಳ ಪ್ರಭಾವ, ನೈತಿಕ ಪತ್ರಿಕೋದ್ಯಮ ಹಾಗೂ ಪ್ರಜಾಪ್ರಭುತ್ವದಲ್ಲಿ ಮಾಧ್ಯಮಗಳ ಪಾತ್ರದ ಬಗ್ಗೆ ಯುವಜನರ ಮನೋಭಾವ ಏನು ಎಂಬುದನ್ನು ಅರಿತುಕೊಳ್ಳುವುದು ಈ ಪ್ರಬಂಧ ಸ್ಪರ್ಧೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಯುವ ಸಮುದಾಯದ ಅಭಿಪ್ರಾಯಗಳು ಮಾಧ್ಯಮ ಕ್ಷೇತ್ರಕ್ಕೂ ಮಾರ್ಗದರ್ಶಕವಾಗಬಹುದು. ತಂತ್ರಜ್ಞಾನ ಮತ್ತು ಸಾಮಾಜಿಕ ಮಾಧ್ಯಮಗಳ ಬಳಕೆ ಹೆಚ್ಚುತ್ತಿರುವ ಇಂದಿನ ಸಂದರ್ಭದಲ್ಲಿ ಸಾಂಪ್ರದಾಯಿಕ ಮಾಧ್ಯಮಗಳ ಬಗ್ಗೆ ವಿದ್ಯಾರ್ಥಿಗಳ ದೃಷ್ಟಿಕೋನವನ್ನು ತಿಳಿದುಕೊಳ್ಳುವುದು ಅಗತ್ಯವಾಗಿದೆ. ವಿದ್ಯಾರ್ಥಿಗಳ ಸೃಜನಶೀಲತೆ ಹಾಗೂ ಚಿಂತನಾ ಸಾಮರ್ಥ್ಯಕ್ಕೆ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಗಿಲ್ಡ್ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದರು.

ಪ್ರಬಂಧ ಸ್ಪರ್ಧೆಯಲ್ಲಿ ಅತ್ಯುತ್ತಮವಾಗಿ ಬರೆಯುವ ವಿದ್ಯಾರ್ಥಿಗಳಲ್ಲಿ ಪ್ರಥಮ ಮೂರು ಸ್ಥಾನಗಳನ್ನು ಪಡೆದವರ ಪ್ರಬಂಧಗಳನ್ನು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಹೊರತರುವ ಸ್ಮರಣ ಸಂಚಿಕೆಯಲ್ಲಿ ಪ್ರಕಟಿಸಲಾಗುವುದು. ಇದರಿಂದ ವಿದ್ಯಾರ್ಥಿಗಳ ಬರವಣಿಗೆಗೆ ಮಾನ್ಯತೆ ದೊರೆಯುವುದರ ಜೊತೆಗೆ ಮತ್ತಷ್ಟು ಬರೆಯಲು ಪ್ರೇರಣೆಯಾಗಲಿದೆ ಎಂದು ವಿಜಯ್ ಜಾಗಟಗಲ್ ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಜಯ ಕರ್ನಾಟಕದ ಹಿರಿಯ ವರದಿಗಾರ ಮಂಜುನಾಥ ಸಾಲಿ, ಗಿಲ್ಡ್ ಪ್ರಧಾನ ಕಾರ್ಯದರ್ಶಿ ವೆಂಕಟೇಶ ಹೂಗಾರ, ಪ್ರಬಂಧ ಸ್ಪರ್ಧೆ ಸಂಯೋಜಕ ಮಲ್ಲನಗೌಡ ಪಾಟೀಲ, ರಿಪೋರ್ಟರ್ಸ್ ಗಿಲ್ಡ್ ಸದಸ್ಯರು, ವಿವಿಧ ಮಾಧ್ಯಮ ಸಂಸ್ಥೆಗಳ ಪತ್ರಕರ್ತರು ಹಾಗೂ ನಗರದ ವಿವಿಧ ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜನಸೇವೆಯಲ್ಲಿ ಮುಂದಡಿಯಿಡುತ್ತ ಸಾಗುತ್ತಿರುವ ಭವಿಷ್ಯದ ಜನನಾಯಕ ಶರಣಗೌಡ ಮಾಲೀಪಾಟೀಲ ಮದರಕಲ್

# ಮದರಕಲ್ ಪರ್ವತರಡ್ಡಿ ಗೌಡ ಮಾಲೀಪಾಟೀಲ್ ಅವರ ಆರನೆಯ ಪುಣ್ಯಸ್ಮರಣೆ ಅಂಗವಾಗಿ ಪ್ರೌಢಶಾಲೆಯ ನೂರು ವಿದ್ಯಾರ್ಥಿನಿಯರಿಗೆ ಸೈಕಲ್ ವಿತರಣೆ ಸಮಾರಂಭ

ಜ್ಞಾನದ ಬಲದಿಂದ ಅಜ್ಞಾನದ ಕೇಡು ನೋಡಯ್ಯ
ಜ್ಯೋತೀಯ ಬಲದಿಂದ ತಮಂಧದ ಕೇಡು
ನೋಡಯ್ಯಾ ಸತ್ಯದ ಬಲದಿಂದ ಅಸತ್ಯದ ಕೇಡು
ನೋಡಯ್ಯಾ
ನಮ್ಮ ಕೂಡಲ ಸಂಗನ ಶರಣರ ಅನುಭಾವದಿಂದ
ಭವದ ಕೇಡು ನೋಡಯ್ಯಾ

ಎನ್ನುವ ಬಸವಣ್ಣನವರ ವಚನದ ಸಾಲುಗಳಂತೆ ನನ್ನೂರು ಮದರಕಲ್ಲಿನ ಮಣ್ಣಿನ ಗುಣವೇ ಅಂತದ್ದಾಗಿದೆ. ಕಪ್ಪೆಚಿಪ್ಪಿನಂತೆ ತನ್ನೊಡಲಲ್ಲಿ ಬಿದ್ದವರನ್ನು ಮುತ್ತಿನಂತ ಮನುಷ್ಯರನ್ನಾಗಿಸುವ ಗುಣವಿದೆ. ಅಂತಹ ಮುತ್ತುಗಳು ಒಂದೊಂದು ರಂಗದಲ್ಲಿ ತಮ್ಮ ಹೊಳಪು ಬೀರಿ ಮದರಕಲ್ ಗ್ರಾಮವನ್ನು ಮಧುರಶಿಲೆಯಾಗಿಸಿವೆ. ಅದರಲ್ಲಿ

ಮೃದು ವಚನವೇ ಸಕಲ ಜಪಂಗಳಯ್ಯ, ಮೃದು ವಚನವೇ ಸಕಲ ತಪಂಗಳಯ್ಯ. ಸದುವಿನಯವೇ ಸದಾಶಿವನ ಒಲುಮೆಯಯ್ಯ, ಕೂಡಲಸಂಗಯ್ಯನ ತಲ್ಲದೊಲ್ಲನಯ್ಯ.

ಎಂಬ ಶರಣರ ನುಡಿಯಂತೆ ಬಾಳಿ ಬದುಕಿ ಆದರ್ಯಪ್ರಾಯರಾದ ಸರಳ ಸಜ್ಜನಿಕೆಯ ಸಾಕಾರ ಮೂರ್ತಿ ಸಹೃದಯಿ ಸಹಕಾರಿ ಧುರೀಣ ಪರ್ವತರಡ್ಡಿ ಗೌಡ ಮಾಲೀಪಾಟೀಲ್ ಮದರಕಲ್ ಅವರು ಚಿರಸ್ಮರಣೀಯರು. ಅವರು ನಮ್ಮೊಂದಿಗೆ ಭೌತಿಕವಾಗಿ ಇಲ್ಲದಿರಬಹುದು ಆದರೆ ಅವರ ನೆನಪುಗಳು ಮಾತ್ರ ಮಾಸದಂತಿವೆ. ಅವರ ಆರನೆಯ ಪುಣ್ಯ ಸ್ಮರಣೆಯ ನಿಮಿತ್ತ ಈ ಲೇಖನ.

ಪರ್ವತರಡ್ಡಿ ಗೌಡ ಮಾಲೀಪಾಟೀಲ ಎನ್ನುವುದಕ್ಕಿಂತ ಪರ್ವತರೆಡ್ಡಪ್ಪ ಮಾಮನವರು ಎಂದರೇನೇ ನನಗೆ ತುಂಬಾ ಖುಷಿ. ಏಕೆಂದರೆ ಅದೇನೋ ಗೊತ್ತಿಲ್ಲ "ಪ್ರೀತಿ ಇಲ್ಲದ ಮೇಲೆ ಹೂವು ಅರಳೀತು ಹೇಗೆ, ಮೋಡ ಕಟ್ಟೀತು ಹೇಗೆ, ಹನಿಯೊಡೆದು ಧರೆಗಿಳಿದೀತು ಹೇಗೆ, ಧರೆ ಹಸಿರಾದೀತು ಹೇ" ಎಂಬ ಕವಿವಾಣಿಯಂತೆ ಪ್ರೀತಿಯೆಂಬ ಬೆಸುಗೆಯಿಂದ ನಮ್ಮ ಕುಟುಂಬಕ್ಕೂ ಅವರ ಕುಟುಂಬಕ್ಕೂ ಎಲ್ಲಿಲ್ಲದ ಅವಿನಾಭಾವ ಸಂಬಧ. ಅಂತಹ ಮಗು ಮನಸ್ಸಿನ ಸರಳ ಜೀವಿ ಶರಣಪ್ಪ ಗೌಡ ಮಾಲಿಪಾಟೀಲ್ ಮತ್ತು ನೀಲಮ್ಮ ತಾಯಿಯವರ ಉದರದಲ್ಲಿ ಚೊಚ್ಚಲ ಮಗನಾಗಿ ಜನಿಸಿ ಬಡತನವನ್ನು ಉಂಡು ಕಡು ಕಷ್ಟದ ದಿನಗಳನ್ನು ಎದುರಿಸಿ ಗೆದ್ದು ಶಕ್ತಿಯಾಗಿ ಬೆಳೆದ ಕಥೆ ಬಹು ರೋಚಕವಾಗಿದೆ.

ಬಡತನದಲ್ಲಿ ಬೆಂದರೂ ಆತ್ಮಸ್ಥೈರ್ಯ ಕಳೆದುಕೊಳ್ಳದೆ ಎಲ್ಲ ಸವಾಲುಗಳನ್ನು ಎದುರಿಸುತ್ತ ತಮ್ಮ ತಂದೆಯವರ ಗರಡಿಯಲ್ಲಿ ರಾಜಕೀಯದ ಅನುಭವವನ್ನು ಪಡೆದುಕೊಂಡ ಪರ್ವತರೆಡ್ಡಿ ಗೌಡ ಮಾಲೀಪಾಟೀಲರು ಗಬ್ಬೂರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಮೂರು ಅವಧಿಗೆ ಅಂದರೆ ಹದಿನೈದು ವರ್ಷಗಳ ಕಾಲ ಅಧ್ಯಕ್ಷರಾಗಿ ಸೇವೆ ಸಲ್ಲಿಸಿ ಹಲವು ಗ್ರಾಮಗಳ ರೈತರಿಗೆ ಸೇವೆ ನೀಡಿದ್ದಲ್ಲದೆ ದೇವದುರ್ಗದ ಪಿಕಾರ್ಡ (ಪಿ.ಎಲ್.ಡಿ.ಬಿ.) ಅಧ್ಯಕ್ಷರಾಗಿ ಬ್ಯಾಂಕಿಗೆ ಮರುಜೀವ ನೀಡಿ ರೈತರೊಂದಿಗೆ ನಿಕಟ ಸಂಪರ್ಕದೊದಿಗೆ ಅನೇಕ ಸೌಲಭ್ಯಗಳನ್ನು ಒದಗಿಸುವುದರ ಮೂಲಕ ಸಹಕಾರ ಕ್ಷೇತ್ರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಹಕಾರಿ ಧುರೀಣ ಎಂದು ಹೆಸರಾಗಿದ್ದರು. ಅವರ ಧರ್ಮಪತ್ನಿ ಶಶಿಕಲಾ ಪಾಟೀಲ್ ಎನ್ನುವದಕ್ಕಿಂತ ನನ್ನ ಅಕ್ಕನವರು ಎಂದರೇನೆ ಸೂಕ್ತ ಹಾಗಾಗಿ ಶಶಿಕಲಾ ಅಕ್ಕನವರು ಕೂಡ ಸಹಕಾರ ಕ್ಷೇತ್ರದಲ್ಲಿ ತಮ್ಮ ಸೇವೆಯನ್ನು ಸಲ್ಲಿತ್ತಿರುವುದು ಮಾತ್ರವಲ್ಲದೆ ಮಹಿಳಾ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಆದರೂ ಅವರಲ್ಲಿಯ ವಿನಯತೆ, ಧನ್ಯತೆಯ ಭಾವ ಮತ್ತು ನಾವು ನಮ್ಮವರೆಂಬ ಗುಣ ಎಲ್ಲವೂ



ವರ್ಣಾತೀತವಾಗಿವೆ.

ಇವನಾರವ ಇವನಾರವ
ಇವನಾರವನೆಂದೆನಿಸದಿರಯ್ಯ,
ಇವ ನಮ್ಮವ ಇವ ನಮ್ಮವ
ಇವ ನಮ್ಮವನೆಂದೆನಿಸಯ್ಯ,
ನಿಮ್ಮ ಮನೆಯ ಮಗನೆಂದೆನಿಸಯ್ಯ
ಕೂಡಲ ಸಂಗಮ ದೇವ

ಎಂಬ ಶರಣರ ನುಡಿಗೆ ಅಕ್ಷರಶಃವಾಗಿ ಶಶಿಕಲಾ ಅಕ್ಕನವರು ಮನೆಗೆ ಬಂದತಹ ಅತಿಥಿಗಳನ್ನು ಮಾತ್ರವಲ್ಲದೆ ಹಿರಿ ಕಿರಿಯರೆನ್ನದೆ ಎಲ್ಲರಿಗೂ ಅವರು ತೋರುವ ವಿನಯತೆ ಸಾಕ್ಷಿಯಾಗಿ ನಿಲ್ಲುತ್ತದೆ. ಅವರಂತೆ ಅವರ ಮಕ್ಕಳಾದ ಪ್ರಭಾವತಿ, ಶರಣಗೌಡ ಮಾಲಿಪಾಟೀಲ ಮತ್ತು ಪ್ರದೀಪ ಗೌಡ ಮಾಲಿಪಾಟೀಲರು. ಕಿರಿಯವರಾದ ಪ್ರದೀಪಗೌಡ ಅವರು ಔದ್ಯೋಗಿಕ ಕ್ಷೇತ್ರದಲ್ಲಿ ಒಳ್ಳೆಯ ಹೆಸರು ಪಡೆದುಕೊಂಡಿದ್ದಲ್ಲದೆ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಂಡು ಹಲವಾರು ನಿರುದ್ಯೋಗಿಗಳಿಗೆ ಉದ್ಯೋಗವಕಾಶ ನೀಡಿರುವದು ಮದರಕಲ್ ಹೆಮ್ಮೆ ಪಡುವ ವಿಷಯವಾಗಿದೆ.

ಶರಣಗೌಡ ಮಾಲಿಪಾಟೀಲರು ತಂದೆಯ ಗರಡಿಯಲ್ಲಿ ಬೆಳೆದು ಉತ್ತಮ ರಾಜಕೀಯ ಅನುಭವವನ್ನು ಪಡೆದುಕೊಂಡು ತಮ್ಮ ರಾಜಕೀಯ ಜೀವನದಲ್ಲಿ ಉತ್ತರೋತ್ತರವಾಗಿ ಬೆಳೆದು ಜನರ ನೋವುಗಳಿಗೆ ಧ್ವನಿಯಾಗಿ ಜನಸೇವೆ ಮಾಡುತ್ತ ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವಗಳಿಗೆ ಕೊಡುಗೈ ದಾನಿಯಾಗಿ ಯುವಕರ ಐಕಾನ್ ಆಗಿರುವದು





ತುಂಬಾ ಸಂತೋಷದ ಸಂಗತಿಯಾಗಿದೆ. ಅದರಂತೆ ತಂದೆಯವರತೆ ಸಹಕಾರ ಕ್ಷೇತ್ರದಲ್ಲಿಯೂ ಸೇವೆಗೈಯಲು ಕಂಕಣಬದ್ಧರಾಗಿ ದೇವದುರ್ಗ ತಾಲೂಕು ಟಿ.ಎ.ಪಿ.ಎಮ್.ಸಿ. ಅಧ್ಯಕ್ಷರಾಗಿ ಸೇವೆ ಸಲ್ಲಿಸುವುದರೊಂದಿಗೆ ನನ್ನೂರಿನ ಮತ್ತು ಸುತ್ತಮುತ್ತಲ ಊರುಗಳ ರೈತರ ಅನುಕೂಲಕ್ಕಾಗಿ ನನ್ನೂರು ಮದರಕಲ್ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಬ್ಯಾಂಕ್ ಆರಂಭಿಸುವುದರಲ್ಲಿ ಶರಣಗೌಡ ಮಾಲೀಪಾಟೀಲರ ಪಾತ್ರ ಅಪಾರವಾಗಿದೆ. ಹೀಗೆ ಸಹಕಾರ ಕ್ಷೇತ್ರಕ್ಕೆ ನನ್ನೂರು ಮದರಕಲ್ಲಿನ ಪರ್ವತರಡ್ಡಿ ಗೌಡ ಮಾಲೀಪಾಟೀಲ ಅವರ ಕುಟುಂಬದ ಸೇವೆ ಅನುಪಮವಾಗಿದೆ.

ಮಾಡುವಂತಿರಬೇಕು ಮಾಡದಂತಿರಬೇಕು.
ಮಾಡುವ ಮಾಟದೊಳಗೆ ತಾನಿಲ್ಲದಂತಿರಬೇಕು.
ಕೂಡಲಸಗಮದೇವರ ನೆನೆವುತ್ತ ನೆನೆವುತ್ತ
ನೆನೆಯದಂತಿರಬೇಕು.

ಎನ್ನುವ ಬಸವಣ್ಣನವರ ವಚನದ ಸಾಲುಗಳಂತೆ ಶರಣಗೌಡ ಮಾಲೀಪಾಟೀಲರು ಸದ್ದುಗದ್ದಲವಿಲ್ಲದೆ ತಮ್ಮ ತಂದೆಯವರ ಪುಣ್ಯಸ್ಮರಣೆಯ ಅಂಗವಾಗಿ ಪ್ರತಿ ವರ್ಷ ಶಾಲಾ ಮಕ್ಕಳಿಗೆ ಶಾಲಾ ಬ್ಯಾಗ್‌ಗಳ ವಿತರಣೆ, ನೋಟ್‌ಬುಕ್ ವಿತರಣೆಯಂತಹ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದ್ದಾರೆ.

ಈ ವರ್ಷ ವಿಶೇಷವಾಗಿ ಮದರಕಲ್ಲಿನ ಪ್ರೌಢಶಾಲೆಯಲ್ಲಿ ಅಧ್ಯಯನ ಮಾಡುತ್ತಿರುವ ನೂರು ವಿದ್ಯಾರ್ಥಿನಿಯರಿಗೆ ಸೈಕಲ್ ವಿತರಣೆ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ.

ಕೊಟ್ಟಿದ್ದು ತನಗೆ, ಬಚ್ಚಿಟ್ಟಿದ್ದು ಪರರಿಗೆ ಕೊಟ್ಟಿದ್ದು ಕೆಟ್ಟಿತೆನಬೇಡ, ಮುಂದೆ ಕಟ್ಟಿಹುದು ಬುತ್ತಿ, ಸರ್ವಜ್ಞ

ಎನ್ನುವ ಸರ್ವಜ್ಞನ ನುಡಿಗಳಂತೆ ದೇವಸ್ಥಾನಗಳ ಜೀರ್ಣೋದ್ಧಾರ ಮಾಡಿಸಿರುವುದು, ಸುತ್ತಮುತ್ತಲಿನ ಹಳ್ಳಿಗಳಲ್ಲಿ ಯುವಕರಿಗೆ ಕ್ರಿಕೇಟ್ ಟೂರ್ನಮೆಂಟ್ ಆಯೋಜಿಸಿ ಬಹುಮಾನ ನೀಡುವುದು, ಸಾಮಾಜಿಕ ಸೇವಾ ಕಾರ್ಯಗಳಿಗೆ ಮತ್ತು ಸಾಂಸ್ಕೃತಿಕವಾಗಿ ಆಯೋಜಿಸುವ ಕಾರ್ಯಕ್ರಮಗಳಿಗೆ ಅನ್ನದಾತರಾಗಿ ಮಾತ್ರವಲ್ಲದೆ ಕಲೆ, ಸಂಗೀತ ಮತ್ತು ಸಾಹಿತ್ಯ ಕ್ಷೇತ್ರದಲ್ಲಿನ ಕಲಾವಿದರಿಗೆ ಮತ್ತು ಸಾಹಿತಿಗಳಿಗೂ ಸಹಾಯಕವಾಗುವಂತಹ ರೀತಿಯಲ್ಲಿ ಸಾಹಿತಿಗಳ ಪುಸ್ತಕ ಮುದ್ರಣಕ್ಕಾಗಿರಬಹುದು ಅಥವಾ ಪ್ರಕಟಿಸಿದ ಪುಸ್ತಕಗಳನ್ನು ಖರೀದಿಸಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತವಾಗಿ ವಿತರಣೆ ಮಾಡುವ ಕಾರ್ಯದಿಂದ ಶಾಲಾ ಕಾಲೇಜು ವಿದ್ಯಾರ್ತಿಗಳಲ್ಲಿ ಓದುವ ಹವ್ಯಾಸವನ್ನು ಬೆಳೆಸುವುದರೊಂದಿಗೆ ಪುಸ್ತಕ ಪ್ರಕಟಿಸಿದ ಸಾಹಿತಿಗಳಿಗೆ ಆರ್ಥಿಕವಾಗಿ ಸಹಾಯ ಮಡುವಂತಹ ಎರಡು ರೀತಿಯ ಸಮಾಜುಪಯೋಗಿ ಕಾರ್ಯಗಳನ್ನು ಮಾಡಿದ್ದಾರೆ. ಹೀಗೆ ನನ್ನೂರು ಮದರಕಲ್ ಪರ್ವತರಡ್ಡಿ ಗೌಡ ಮಾಲೀಪಾಟೀಲ್ ಎಂಬ ಸಹಕಾರಿ ಧುರೀಣರ ಇಡಿ ಕುಟುಂಬ ಇಂದು ಸಹಕಾರ ಕ್ಷೇತ್ರದಲ್ಲಿ ಅಮೋಘವಾದ ಸೇವೆ ಸಲ್ಲಿಸುವುದರ ಜೊತೆಗೆ ಅವರ ಸುಪುತ್ರ ಶರಣಗೌಡ ಮಾಲೀಪಾಟೀಲರು ಜನಸೇವೆಯಲ್ಲಿ ಮುನ್ನುಗ್ಗುತ್ತ ಭವಿಷ್ಯದ ಜನನಾಯಕರಾಗಿ ರೂಪಗೊಳ್ಳುತ್ತಿರುವುದು ನನಗೆ ಹೆಮ್ಮೆಯ ವಿಷಯವಾಗಿದೆ.

ತುಂಗ ಬಿಂಬ

- ಡಾ. ತಿಮ್ಮಯ್ಯ ಶೆಟ್ಟಿ ಇಲ್ಲೂರು
ಮದರಕಲ್, ರಾಯಚೂರು

# ಅಲೆಮಾರಿ, ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

ರಾಯಚೂರು ಸೆ.ಡಿ 11 (ಕರ್ನಾಟಕ ವಾರ್ತೆ): ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ 2026-27ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಅರ್ಹ ಅಭ್ಯರ್ಥಿಗಳಿಂದ ಸೇವಾ ಸಿಂಧ ಪೋರ್ಟಲ್ ನಲ್ಲಿ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದಿಂದ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು-ಶೈಕ್ಷಣಿಕ ನೇರಸಾಲ ಯೋಜನೆ (ಹೊಸದು), ಅರಿವು-ಶೈಕ್ಷಣಿಕ ನೇರಸಾಲ ಯೋಜನೆ (ನವೀಕರಣ), ಸ್ವಾವಲಂಬಿ ಸಾರಥಿ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಅರ್ಹತೆಗಳು: ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಅಲೆಮಾರಿ ಮತ್ತು ಅರೆ ಅಲೆಮಾರಿ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು.

ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನ ರೂ.3.50/-ಲಕ್ಷಗಳು. ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರರು 21 ವರ್ಷಗಳಿಂದ 45 ವರ್ಷಗಳ ಮಿತಿಯಲ್ಲಿರಬೇಕು. ವಿದೇಶಿ ವ್ಯಸಾಂಗ ಸಾಲ ಯೋಜನೆ: ಈ ಯೋಜನೆಯಿ ವಾರ್ಷಿಕ ವರಮಾನವು ರೂ.15.00 ಲಕ್ಷಗಳ ಮಿತಿಯಲ್ಲಿ ಇರಬೇಕು, ವಯೋಮಿತಿ: ವಿದ್ಯಾರ್ಥಿಯ ವಯಸ್ಸು 25 (ಸ್ನಾತಕೋತ್ತರ ಪದವೀಧರರಿಗೆ) ಮತ್ತು ಪಿ.ಹೆಚ್.ಡಿ ಪದವೀಧರರಿಗೆ 27 ವರ್ಷಗಳ ವಯೋಮಿತಿಯನ್ನು ನಿಗದಿಪಡಿಸಲಾಗಿದೆ.

ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98,000/- ಮತ್ತು ನಗರ ಪ್ರದೇಶದವರಿಗೆ ರೂ. 1,20,000/-ಗಳ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ 33%, ವಿಕಲಚೇತನರಿಗೆ 5% ಹಾಗೂ ತೃತೀಯ ಲಿಂಗಿಗಳಿಗೆ ಶೇ1% ಮೀಸಲಾತಿ ಇರಿಸಿದೆ.

ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2026-27 ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಈ ಯೋಜನೆಗಳಡಿ ಸಹಾಯಧನ/ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಸೇವಾಸಿಂಧ ಪೋರ್ಟಲ್‌ನಲ್ಲಿ ಸೆಪ್ಟಂಬರ್ 27ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವಾಗ ಆಧಾರ್ ಕಾರ್ಡನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ ಖಾತೆ ಪುಸ್ತಕಗಳಲ್ಲಿನ ಹೆಸರು ಕಡ್ಡಾಯವಾಗಿ ತಾಳೆಯಾಗಬೇಕು. ಬೆಂಗಳೂರು-ಒನ್/ಕರ್ನಾಟಕ-ಒನ್/ಅಟಲ್-ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ವಿಳಾಸ: https:// kaad.karnataka.gov.in ನಲ್ಲಿ ಅಥವಾ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ: 080-22374832/833 ಯಿಂದ ಪಡೆಯಬಹುದಾಗಿದೆ. ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08532-250440ಗೆ ಸಂಪರ್ಕ ಮಾಡಬಹುದಾಗಿದೆ.

2024-25 ಮತ್ತು 2025-26ನೇ ಸಾಲಿನಲ್ಲಿ ಅರ್ಜಿಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಹೀರೆಕೊಟ್ಟೆಕಲ್ ಗ್ರಾಮದಲ್ಲಿ ಪ್ರಜಾಸೇವೆ ಆಂದೋಲನ ಕಾರ್ಯಕ್ರಮ

ರಾಯಚೂರು ಸೆ. 11 (ಕರ್ನಾಟಕ ವಾರ್ತೆ): ಜಿಲ್ಲೆಯ ಮಾನವಿ ವಿಧಾನಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಹೀರೆಕೊಟ್ಟೆಕಲ್ ಗ್ರಾಮದ ನಾಡ ಕಚೇರಿ ಆವರಣದಲ್ಲಿ ಪ್ರಜಾಸೇವೆ ಆಂದೋಲನ-2026ರ ಕಾರ್ಯಕ್ರಮವನ್ನು ಸೆಪ್ಟಂಬರ್ 12ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ತಾಲೂಕಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿವಿಧ ಸೌಲಭ್ಯಗಳನ್ನು ಪಡೆಯುವಂತೆ ಮಾನವಿ ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಂಡಲಗಿರಿ, ಹಿರೇಬಿದನಾಳ ಗ್ರಾ.ಪಂ.ಗಳಲ್ಲಿ ವಿ.ಆರ್.ಡಬ್ಲ್ಯೂ ಹುದ್ದೆಗೆ ಅರ್ಜಿ ಆಹ್ವಾನ

ಕೊಪ್ಪಳ ಸೆಪ್ಟೆಂಬರ್ 11 (ಕರ್ನಾಟಕ ವಾರ್ತೆ): ಜಿಲ್ಲೆಯ ಕುಕನೂರು ತಾಲೂಕಿನ ಮಂಡಲಗಿರಿ ಹಾಗೂ ಹಿರೇಬಿದನಾಳ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ (ವಿ.ಆರ್.ಡಬ್ಲ್ಯೂ) ತಾತ್ಕಾಲಿಕ ಹುದ್ದೆಗಳ ಭರ್ತಿಗೆ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು ಎಸ್ಸೆಸ್ಸೆಲ್ಸಿ ತೇರ್ಗಡೆಯಾಗಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿ ಹೊಂದಿರಬೇಕು. ವಿಶೇಷ ಶಿಕ್ಷಣ, ಆರ್‌ಸಿಐ ತರಬೇತಿ, ದಿವ್ಯಾಂಗ ಮಿತ್ರ ತರಬೇತಿ, ಸನ್ನೆ ಭಾಷೆ ಅಥವಾ ದೈಹಿಕ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ. ಕನಿಷ್ಠ 40% ಅಂಗವಿಕಲತೆ ಹೊಂದಿರಬೇಕು (ಭಾಗಶಃ ಅಂಧರು, ಭಾಗಶಃ ಶ್ರವಣದೋಷವುಳ್ಳವರು ಹಾಗೂ ದೈಹಿಕ ಅಂಗವಿಕಲರಿಗೆ ಅವಕಾಶ) ಮತ್ತು ಕಡ್ಡಾಯವಾಗಿ ಯು.ಡಿ.ಐ.ಡಿ) ಕಾರ್ಡ್ ಹೊಂದಿರಬೇಕು. ಸಂಬಧಿಸಿದ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರಬೇಕು. ಇದಕ್ಕಾಗಿ ಗ್ರಾಮ ಪಂಚಾಯತಿ ದೃಢೀಕರಣ ಪತ್ರ ಕಡ್ಡಾಯ.

ಆಯ್ಕೆಯಾಗುವ ಕಾರ್ಯಕರ್ತರಿಗೆ ಮಾಸಿಕ ರೂ. 10,000 ಗೌರವಧನ ನೀಡಲಾಗುತ್ತದೆ. ಆಸಕ್ತರು ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ, ತಹಶೀಲ್ದಾರರಿಂದ ಪಡೆದ ಜಾತಿ, ಆದಾಯ ಮತ್ತು ವಾಸಸ್ಥಳ ಪ್ರಮಾಣಪತ್ರ ಹಾಗೂ ವಿಕಲಚೇತನರ ಕಲ್ಯಾಣಕ್ಕಾಗಿ ಸೇವೆ ಸಲ್ಲಿಸಿದ ಅನುಭವವಿದ್ದರೆ ಸಂಬಂಧಿಸಿದ ದಾಖಲೆಗಳೊಂದಿಗೆ ಸೆಪ್ಟೆಂಬರ್ 15 ರಿಂದ ಸೆ. 25ರ ಒಳಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಸರ್ಕಾರಿ ನೌಕರರ ಭವನ ಐ.ಬಿ ಎದುರುಗಡೆ, ಗೋವಿಂದರಾಯ ಕಲ್ಯಾಣ ಮಂಟಪದ ಹಿಂದುಗಡೆ, ಕಿನ್ನಾಳ ರಸ್ತೆ, ಕೊಪ್ಪಳ. ಇಲ್ಲಿಗೆ ಕಚೇರಿ ವೇಳೆಯಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ಕುಕನೂರು ತಾಲೂಕು ಎಂ.ಆರ್.ಡಬ್ಲ್ಯೂ ವೆಂಕರಡ್ಡಿ ಮೊ.ಸಂ: 6360721033 ಹಾಗೂ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ 08539-295496 ಗೆ ಸಂಪರ್ಕಿಸುವತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಲಿಗುಡ್ಡ ಗ್ರಾಮಸ್ಥರಿಗೆ ಸ್ಮಶಾನಕ್ಕಾಗಿ 2 ಎಕರೆ ಜಮೀನು ಮಂಜೂರಿಗೆ ಒತ್ತಾಯ



ಲಿಂಗಸುಗೂರ: ಪಟ್ಟಣದ ಮುದಗಲ್ ರಸ್ತೆಯಲ್ಲಿರುವ ಪ್ರಾದೇಶಿಕ ವಲಯ ಅರಣ್ಯ ಇಲಾಖೆಯ ವ್ಯಾಪ್ತಿಯ ಸರ್ವೆ ನಂ.492ರಲ್ಲಿ ಎರಡು ಎಕರೆ ಸರ್ಕಾರಿ ಜಮೀನನ್ನು ಹುಲಿಗುಡ್ಡ ಗ್ರಾಮದ ಸಾರ್ವಜನಿಕ ಸ್ಮಶಾನಕ್ಕಾಗಿ ಮಂಜೂರು ಮಾಡುವಂತೆ ಗ್ರಾಮಸ್ಥರು ಜನಪರ ಹೋರಾಟ ಸಮಿತಿ ನೇತೃತ್ವದಲ್ಲಿ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಸರ್ವೆ ನಂ.492ಕ್ಕೆ ಸಂಬಂಧಿಸಿದ ಸುಮಾರು 47 ಎಕರೆ ಸರ್ಕಾರಿ ಅರಣ್ಯ ಭೂಮಿಯಲ್ಲಿ ಎರಡು ಎಕರೆ ಪ್ರದೇಶವನ್ನು ಸ್ಮಶಾನಕ್ಕಾಗಿ ಮೀಸಲಿಡುವಂತೆ 2017ರಿಂದಲೇ ಗ್ರಾಮಸ್ಥರು ಹಾಗೂ ವಿವಿಧ ಸಂಘಟನೆಗಳು ಮನವಿ ಮತ್ತು ಹೋರಾಟ ನಡೆಸುತ್ತಾ ಬಂದಿವೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಸ್ಮಶಾನಕ್ಕಾಗಿ ಗುರುತಿಸಲಾಗಿರುವ ಎರಡು ಎಕರೆ ಪ್ರದೇಶದಲ್ಲಿ ಪ್ರಸ್ತುತ ನಡೆಯುತ್ತಿರುವ ಭೂ ಅಭಿವೃದ್ಧಿ, ಗುಡ್ಡ ಸಮತಟ್ಟು ಹಾಗೂ ಮಣ್ಣು ತೆರವು ಕಾಮಗಾರಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ ತನಿಖೆ ನಡೆಸಬೇಕು. ಅಲ್ಲದೆ, ಕಂದಾಯ ದಾಖಲೆಗಳನ್ನು ಪರಿಶೀಲಿಸಿ ಸ್ಮಶಾನಕ್ಕೆ ಮೀಸಲಿರುವ ಜಾಗವನ್ನು ಅಧಿಕೃತವಾಗಿ ಮಂಜೂರು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಹುಲಿಗುಡ್ಡ ಗ್ರಾಮಸ್ಥರಿಗೆ ಪ್ರತ್ಯೇಕ ರುದ್ರಭೂಮಿ ಅಗತ್ಯವಿರುವ ಹಿನ್ನೆಲೆಯಲ್ಲಿ ಸರ್ವೆ ನಂ.492ರಲ್ಲಿ ಎರಡು ಎಕರೆ ಜಾಗವನ್ನು ಸಾರ್ವಜನಿಕ ಸ್ಮಶಾನಕ್ಕಾಗಿ ಮೀಸಲಿಟ್ಟು, ಪಹಣಿ ಸೇರಿದಂತೆ ಅಗತ್ಯ ದಾಖಲೆಗಳಲ್ಲಿ ನಮೂದಿಸುವ ಮೂಲಕ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ರಹಿಮಾನ ಚಿನ್ನಿಕಟ್ಟಿ, ಜಿಲ್ಲಾಧ್ಯಕ್ಷ ಚನ್ನಬಸಪ್ಪ ಕಿಡದೂರು, ವೆಂಕಟೇಶ ಇಸ್ಲಾಮಪೂರ, ಲಕ್ಷ್ಮಣ ಅಮದಿಹಾಳ, ಸಂತೋಷ, ವಿಶ್ವನಾಥ, ಬಾಬಾ ಜಾನಿ, ರವಿಕುಮಾರ ಜೋಗಿ, ರಮೇಶ ಕೋಟಿಕೆಲ್, ಅಯ್ಯಪ್ಪ, ಚೌಡಪ್ಪ ಯರಡೋಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಚರಂಡಿ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಕಾಳಾಪೂರ ಗ್ರಾ.ಪಂಗೆ ದಲಿತ ಮಹಿಳೆಯರ ಮುತ್ತಿಗೆ




ಲಿಂಗಸುಗೂರ: ತಾಲೂಕಿನ ಐದನಾಳ ಗ್ರಾಮದ ಎಸ್‌ಸಿ ವಾರ್ಡ್‌ನಲ್ಲಿ ಕಳೆದ ನಾಲ್ಕು ತಿಂಗಳಿಂದ ಚರಂಡಿ ನೀರು ರಸ್ತೆ ಮೇಲೆ ಹರಿಯುತ್ತಿದ್ದು, ಸಮಸ್ಯೆ ಪರಿಹಾರಕ್ಕೆ ಹಲವು ಬಾರಿ ಮನವಿ ಮಾಡಿದರೂ ಕ್ರಮ ಕೈಗೊಳ್ಳದಿರುವುದನ್ನು ಖಂಡಿಸಿ ದಲಿತ ಮಹಿಳೆಯರು ಕಾಳಾಪೂರ ಗ್ರಾಮ ಪಂಚಾಯಿತಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಐದನಾಳ ಗ್ರಾಮದ ದಲಿತ ಕೇರಿಯ ಮುಖ್ಯ ರಸ್ತೆಯಲ್ಲೇ ಚರಂಡಿಯ ಕೊಳಚೆ ನೀರು ನಿರಂತರವಾಗಿ ಹರಿಯುತ್ತಿದ್ದು, ವಯೋವೃದ್ಧರು, ಮಹಿಳೆಯರು, ಮಕ್ಕಳು ಹಾಗೂ ಗರ್ಭಿಣಿಯರು ಸಂಚರಿಸಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ದುರ್ವಾಸನೆ ಮತ್ತು ಕೊಳಚೆ ನೀರಿನಿಂದ ವಾರ್ಡ್‌ನ ಹಲವು ಕುಟುಂಬಗಳ ಆರೋಗ್ಯದ ಮೇಲೂ ಪರಿಣಾಮ ಬೀರುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಈ ಸಮಸ್ಯೆಯ ಕುರಿತು ಕಾಳಾಪೂರ ಗ್ರಾಮ ಪಂಚಾಯಿತಿ ಪಿಡಿಒ ಅವರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ನಿರ್ಲಕ್ಷ್ಯ ವಹಿಸಲಾಗಿದೆ. ಬಡ ಹಾಗೂ ದಲಿತ ಕುಟುಂಬಗಳಿಗೆ ಅನಾರೋಗ್ಯ ಉಂಟಾದರೆ ಚಿಕಿತ್ಸಾ ವೆಚ್ಚ ಭರಿಸುವುದು ಸಹ ಕಷ್ಟವಾಗುತ್ತಿದೆ. ಆದ್ದರಿಂದ ಪಿಡಿಒ ಕೂಡಲೇ ವಾರ್ಡ್‌ಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿ, ಚರಂಡಿಯನ್ನು ಸ್ವಚ್ಛಗೊಳಿಸಿ ಸುಗಮ ನೀರು ಹರಿವಿಗೆ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಐದನಾಳ ಗ್ರಾಮದ ಎಸ್‌ಸಿ ವಾರ್ಡ್‌ನ ಮಹಿಳೆಯರಾದ ಈರಮ್ಮ, ವಿದ್ಯಾ, ಹನುಮಮ್ಮ, ಯಲ್ಲಮ್ಮ, ದುರ್ಗಮ್ಮ, ಬಸಮ್ಮ, ದೇವಮ್ಮ, ರೇಣಮ್ಮ, ಶರಣಮ್ಮ, ಅಮರಮ್ಮ, ಸಾವಿತ್ರಿ, ರಾಧಾ, ಕೂಲಿಕಾರರ ಸಂಘದ ಅಧ್ಯಕ್ಷ ಗುಂಡಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

# ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿವೆ: ಬಿ.ಆರ್. ಭಾಸ್ಕರ್ ಪ್ರಸಾದ್



ಮಾನ್ವಿ: ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯ ಹಾಗೂ ಅಸ್ಪೃಶ್ಯತೆ ಆಚರಣೆಗಳಿಗೆ ಸಂಬಂಧಿಸಿದ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಕರ್ನಾಟಕ ದಲಿತ ಒಕ್ಕೂಟಗಳ ಸಂಸ್ಥಾಪಕ ಅಧ್ಯಕ್ಷ ಹಾಗೂ ರಾಜ್ಯ ಒಳಮೀಸಲಾತಿ ಕ್ರಾಂತಿಕಾರಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಬಿ.ಆರ್. ಭಾಸ್ಕರ್ ಪ್ರಸಾದ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಲಿತಪರ ಸರ್ಕಾರವೆಂದು ಹೇಳಿಕೊಳ್ಳುತ್ತಿರುವ ರಾಜ್ಯ ಸರ್ಕಾರ ಕಳೆದ ಮೂರು ವರ್ಷಗಳಿಂದ ಅಧಿಕಾರದಲ್ಲಿದ್ದರೂ ದಲಿತ ಸಮುದಾಯಗಳ ಮೇಲೆ ಶೋಷಣೆ ಮುಂದುವರಿದಿದೆ. ರಾಜ್ಯದಲ್ಲಿ ಶೇ.37ರಷ್ಟು ಹೆಚ್ಚು ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ದಾಖಲಾಗುತ್ತಿವೆ ಎಂದು ಅವರು ಆರೋಪಿಸಿದರು.

ದಲಿತ ಸಮುದಾಯಕ್ಕೆ ಸೇರಿದವರು ಉನ್ನತ ಹುದ್ದೆಗಳಲ್ಲಿ ಇದ್ದರೂ ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಅಸ್ಪೃಶ್ಯತೆ ಮತ್ತು ಜಾತಿ ಆಧಾರಿತ ತಾರತಮ್ಯ ತಡೆಗೆ ಪರಿಣಾಮಕಾರಿ ಕ್ರಮಗಳು ಕೈಗೊಳ್ಳಲಾಗುತ್ತಿಲ್ಲ ಎಂದು ದೂರಿದರು. ರಾಜ್ಯದ ಹಿಂದುಳಿದ ವರ್ಗಗಳ ಸ್ವಾಮೀಜಿಗಳ ಒಕ್ಕೂಟದವರು ಸರ್ಕಾರದಿಂದ ಅನುದಾನ ಪಡೆಯುವುದಕ್ಕೆ ಮಾತ್ರ ಸೀಮಿತರಾಗದೆ, ಸೌಹಾರ್ದತಾ ಜಾಥಾಗಳನ್ನು ನಡೆಸಿ ವಿವಿಧ ಸಮುದಾಯಗಳ ನಡುವೆ ಸಾಮರಸ್ಯ ಮೂಡಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ನಡೆದಿದ್ದರೂ ಗೃಹ ಸಚಿವರು ಸೂಕ್ತ ಪ್ರತಿಕ್ರಿಯೆ ನೀಡಿಲ್ಲ. ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ಕಠಿಣ ಕ್ರಮಕ್ಕೆ ಸೂಚನೆ ನೀಡಬೇಕು ಹಾಗೂ ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪರಿಹಾರ ಮತ್ತು ರಕ್ಷಣೆಯನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿಗಳ ನಡುವೆಯೂ ಶೋಷಣೆ ಮತ್ತು ಅಸ್ಪೃಶ್ಯತೆ ಆಚರಣೆಗಳು ನಡೆಯುತ್ತಿರುವ ಕುರಿತು ಸರ್ಕಾರ ಗಂಭೀರವಾಗಿ ಗಮನಹರಿಸಬೇಕು. ಧಾರ್ಮಿಕ ನಿಂದನೆ ಮತ್ತು ಜಾತಿಗಳ ನಡುವೆ ಸಂಘರ್ಷ ಉಂಟುಮಾಡುವವರ ವಿರುದ್ಧ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳಬೇಕು. ಇಂತಹ ಪ್ರಕರಣಗಳಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಹೊಣೆಗಾರಿಕೆಯನ್ನು ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

ಎಸ್‌ಸಿಪಿ-ಟಿಎಸ್‌ಪಿ ಅನುದಾನವನ್ನು ದಲಿತ ಸಮುದಾಯಗಳ ಅಭಿವೃದ್ಧಿಗಾಗಿಯೇ ಸಮರ್ಪಕವಾಗಿ ಬಳಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಪ್ರಭುರಾಜ್ ಕೊಡ್ಲಿ, ಎಲ್.ವಿ. ಸುರೇಶ್, ನಾಗರಾಜ ಗುಡೇಮಾರನಹಳ್ಳಿ, ಶಾನವಾಜ್, ಶಿವರಾಜ, ನುಸರತ್, ಎಲಿಯಾಸ್ ರೆಡ್ಡಿ, ಲಕ್ಷ್ಮಣ, ವಿನೋದ್, ಅವಿನಾಶ್, ಶಂಕ್ರಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾನ್ವಿ, ಸಿರವಾರ, ಸಿಂಧನೂರು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲು ಒತ್ತಾಯ




ಮಾನ್ವಿ: ಜಿಲ್ಲೆಯಲ್ಲಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಮಾನ್ವಿ, ಸಿರವಾರ ಹಾಗೂ ಸಿಂಧನೂರು ತಾಲೂಕುಗಳನ್ನು ಇನ್ನೂ ಅಧಿಕೃತವಾಗಿ ಬರಪೀಡಿತ ಪಟ್ಟಿಗೆ ಸೇರಿಸಿಲ್ಲ. ರಾಜ್ಯ ಸರ್ಕಾರ ಕೂಡಲೇ ಈ ಮೂರು ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿ, ಪ್ರತಿ ತಾಲೂಕಿಗೆ ₹100 ಕೋಟಿ ಬರ ಪರಿಹಾರ ಬಿಡುಗಡೆ ಮಾಡಬೇಕು ಎಂದು ಕರ್ನಾಟಕ ರೈತ ಸಂಘದ ರಾಷ್ಟ್ರೀಯ ಉಪಾಧ್ಯಕ್ಷ ಡಿ.ಎಸ್. ಪೂಜಾರ್ ಒತ್ತಾಯಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬರದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಖುಷ್ಕಿ ಬೆಳೆಗೆ ಪ್ರತಿ ಎಕರೆಗೆ ₹30 ಸಾವಿರ ಹಾಗೂ ನೀರಾವರಿ ಬೆಳೆಗೆ ₹50 ಸಾವಿರ ಪರಿಹಾರ ನೀಡಬೇಕು. ರೈತರು ಹಾಗೂ ಕೃಷಿ ಕೂಲಿಕಾರ್ಮಿಕರಿಗೆ ಅಗತ್ಯ ಆಹಾರ ಧಾನ್ಯಗಳನ್ನು ಸಮರ್ಪಕವಾಗಿ ಪೂರೈಸಬೇಕು ಎಂದು ಆಗ್ರಹಿಸಿದರು.

ರೈತರು, ಕೂಲಿಕಾರ್ಮಿಕರು, ಸ್ತ್ರೀಶಕ್ತಿ ಸಂಘಗಳ ಸದಸ್ಯರು ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ರಾಷ್ಟ್ರೀಕೃತ ಬ್ಯಾಂಕ್‌ಗಳು ಹಾಗೂ ಸಹಕಾರಿ ಬ್ಯಾಂಕ್‌ಗಳಲ್ಲಿ ಪಡೆದಿರುವ ಸಾಲಗಳನ್ನು ಮನ್ನಾ ಮಾಡಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಗ್ರಾಮೀಣ ಭಾಗದ ಕೂಲಿಕಾರ್ಮಿಕರಿಗೆ ಅವರ ಗ್ರಾಮಗಳಲ್ಲಿಯೇ ವರ್ಷಪೂರ್ತಿ ಉದ್ಯೋಗ ಕಲ್ಪಿಸಬೇಕು ಎಂದು ಹೇಳಿದರು.

ರೈತರ ಜಾನುವಾರುಗಳಿಗೆ ಉಚಿತ ಮೇವಿನ ವ್ಯವಸ್ಥೆ ಮಾಡಬೇಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರು ಒದಗಿಸಬೇಕು. ಸರ್ಕಾರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಶಾಸಕರ ಮನೆಗಳ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಅಶೋಕ ನೀಲಗಲ್, ರಾಜ್ಯ ಕಾರ್ಯದರ್ಶಿ ಚಿಟ್ಟಿಬಾಬು, ಜಿಲ್ಲಾ ಕಾರ್ಯದರ್ಶಿ ಹುಲಿಗೆಪ್ಪ ಸಿರವಾರ, ರಮೇಶ್ ಪಾಟೀಲ್, ವೀರೇಶ ನಾಯಕ್, ಮಲ್ಲೇಶ ಚಿಕ್ಕಲಪರ್ವಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯಮಟ್ಟದ 3ನೇ ಬುದ್ಧ ಪ್ರಜ್ಞಾ ಮಕ್ಕಳ ಮೈತ್ರಿ ಕಾರ್ಯಕ್ರಮ ಸೆ.12, 13ರಂದು




ಮಾನ್ವಿ: ಅಂಬೇಡ್ಕರ್ ಅರಿವಿನ ಮಾರ್ಗದಲ್ಲಿ ರಾಜ್ಯಮಟ್ಟದ 3ನೇ ಬುದ್ಧ ಪ್ರಜ್ಞಾ ಮಕ್ಕಳ ಮೈತ್ರಿ ಕಾರ್ಯಕ್ರಮ-2026 ಅನ್ನು ಸೆ.12 ಮತ್ತು 13ರಂದು ಎರಡು ದಿನಗಳ ಕಾಲ ರಾಯಚೂರಿನ ಪಂಡಿತ್ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಬುದ್ಧನ ಅನುಯಾಯಿ ಲಕ್ಷ್ಮಣ ಜಾನೇಕಲ್ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 5ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ ಒಟ್ಟು 32 ವಿವಿಧ ಬುದ್ಧ ಪ್ರಜ್ಞಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಶ್ರೀ ಜ್ಞಾನ ಪ್ರಕಾಶ ಸ್ವಾಮಿ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳ ಬೌದ್ಧ ಭಿಕ್ಕುಗಳ ಉಪಸ್ಥಿತಿಯಲ್ಲಿ ಕಾರ್ಯಕ್ರಮಗಳು ನಡೆಯಲಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಅಂದಾಜು 600ಕ್ಕೂ ಹೆಚ್ಚು ಮಕ್ಕಳು ಹಾಗೂ ಪಾಲಕರು ಭಾಗವಹಿಸುವ ನಿರೀಕ್ಷೆಯಿದೆ. ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಬುದ್ಧನ ವಿಚಾರಧಾರೆ, ಮಾನವೀಯ ಮೌಲ್ಯಗಳು ಹಾಗೂ ಪ್ರಜ್ಞೆಯನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬುದ್ಧನ ಅನುಯಾಯಿಗಳಾದ ತಿಪ್ಪಣ್ಣ ಬಾಗಲವಾಡ, ಹನುಮಂತ ಉದ್ಬಾಳ್, ಹನುಮಂತ್ರಾಯ ವಕೀಲರು, ದತ್ತಾತ್ರೇಯ ವಕೀಲರು, ಅಮರೇಶ ನಂದಿಹಾಳ್, ಹನುಮಂತ ಬೈಲ್ ಮಾರ್ಚೆಡ್, ಶ್ರೀನಿವಾಸ ವಕೀಲರು, ಕಾಮೇಶ, ಶಿವು ಶಂಕರ ಕೋಟ್ನೆಕಲ್, ಈಶಪ್ಪ ಬೈಲ್ ಮಾರ್ಚೆಡ್, ಜಗದೀಶ ವಕೀಲರು, ಶಿವಕುಮಾರ ಕಪಗಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸೆ.17ರಂದು ಕೆಆರ್‌ಎಸ್ ಪಕ್ಷದಿಂದ ಕಲ್ಯಾಣ ಕರ್ನಾಟಕ ವಿಜಯೋತ್ಸವ




ಮಾನ್ವಿ: ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ವತಿಯಿಂದ ಸೆ.16 ಮತ್ತು 17ರಂದು ಪಟ್ಟಣದ ಟೌನ್ ಹಾಲ್‌ನಲ್ಲಿ ಕಲ್ಯಾಣ ಕರ್ನಾಟಕ ವಿಜಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪಕ್ಷದ ರಾಜ್ಯ ಯುವ ಘಟಕದ ಕಾರ್ಯದರ್ಶಿ ದ್ಯಾವಣ್ಣ ನಾಯಕ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದ ರಾಜ್ಯ ಗೌರವಾಧ್ಯಕ್ಷ ರವಿಕೃಷ್ಣ ರೆಡ್ಡಿ, ರಾಜ್ಯಾಧ್ಯಕ್ಷ ದೀಪಕ್ ಸೇನ್ ಹಾಗೂ ಸೋಮಸುಂದರ ಕೆ.ಎಸ್. ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

ಸೆ.17ರಂದು ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಾಥಾ ಆರಂಭಗೊಂಡು ಬಸವ ವೃತ್ತ, ತಹಸೀಲ್ದಾರ್ ಕಚೇರಿ ಹಾಗೂ ಸಿಮೆಂಟ್ ರಸ್ತೆ ಮೂಲಕ ಟೌನ್ ಹಾಲ್ ತಲುಪಲಿದೆ. ಇದೇ ಸಂದರ್ಭದಲ್ಲಿ ಭಾರತೀಯ ಯೋಧರು, 371(ಜೆ) ಮೀಸಲಾತಿ ಹೋರಾಟದಲ್ಲಿ ಭಾಗವಹಿಸಿದವರು, ಏಮ್ಸ್ ಹೋರಾಟಗಾರರು ಹಾಗೂ ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟದಲ್ಲಿ ಪಾಲ್ಗೊಂಡವರನ್ನು ಗೌರವಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೆಆರ್‌ಎಸ್ ಪಕ್ಷದ ರಾಜ್ಯಮಟ್ಟದ ಪದಾಧಿಕಾರಿಗಳು ಹಾಗೂ ವಿವಿಧ ಜಿಲ್ಲೆಗಳ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ವಿಜಯಪೋಳ್, ರಾಜ್ಯ ಎಸ್‌ಸಿ-ಎಸ್‌ಟಿ ಘಟಕದ ಜಂಟಿ ಕಾರ್ಯದರ್ಶಿ, ಜಿಲ್ಲಾ ಜಂಟಿ ಕಾರ್ಯದರ್ಶಿ ಜಿ. ವೆಂಕಟೇಶ, ಜಿಲ್ಲಾ ಕಾರ್ಯದರ್ಶಿ ಪಂಪಾಪತಿ ಹಡಪದ್, ರಮೇಶ ನಾಯಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ: ಜಿಲ್ಲಾ ಮಟ್ಟಕ್ಕೆ ಪ್ರತಿಕ್ಷಾ ಮೇಟಿಗೌಡ ಆಯ್ಕೆ



ರಾಯಚೂರು, ಸೆ.11: ರಾಯಚೂರು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ನವಚೇತನ ಶಾಲೆ ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 202627ನೇ ಸಾಲಿನ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಗಿಲ್ಲೇಸೂಗೂರು, ಚಂದ್ರಬಂಡ ರಸ್ತೆ, ಆಶ್ರಯ ಕಾಲೋನಿ, ರಾಯಚೂರಿನ ಎಂಟನೇ ತರಗತಿ ವಿದ್ಯಾರ್ಥಿನಿ ಪ್ರತಿಕ್ಷಾ ಮೇಟಿಗೌಡ ಉದ್ದ ಜಿಗಿತ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಪ್ರತಿಭಾವಂತ ವಿದ್ಯಾರ್ಥಿನಿ ಪ್ರತಿಕ್ಷಾ ಮೇಟಿಗೌಡ ಅವರ ಸಾಧನೆಗೆ ಶಾಲೆಯ ಪ್ರಾಂಶುಪಾಲರಾದ ಹನುಮೇಶ್, ದೈಹಿಕ ಶಿಕ್ಷಣ ಶಿಕ್ಷಕರಾದ ವೀಣಾ ಎನ್ ಜೆ ಹಾಗೂ ವಸತಿ ನಿಲಯದ ನಿಲಯ ಪಾಲಕರಾದ ವಿಶ್ವನಾಥ್ ಮತ್ತು ಎಲ್ಲಾ ಸಿಬ್ಬಂದಿ ವರ್ಗದವರು ಅಡುಗೆ ಸಹಾಯಕರು ವಿದ್ಯಾರ್ಥಿನಿ ಜಿಲ್ಲಾ ಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡುವಂತೆ ಅಭಿನಂದನೆ ತಿಳಿಸಿ ಶುಭ ಹಾರೈಸಿದ್ದಾರೆ.

# ಅಖಂಡ ಶಿವ ಭಜನೆ, ಪಲ್ಲಕ್ಕಿ ಮೆರವಣಿಗೆ ಹಾಗೂ ಅನ್ನಸಂತರ್ಪಣೆ



ರಾಯಚೂರು: ನಗರದ ವಾರ್ಡ್ ನಂ.23ರ ಮಡ್ಡಿಪೇಟೆಯಲ್ಲಿರುವ ಶ್ರೀ ಶಂಖುಚಕ್ರ ಮಾರುತಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಅಂಗವಾಗಿ ಒಂದು ತಿಂಗಳ ಕಾಲ ನಡೆದ ಶಿವ ಭಜನಾ ಕಾರ್ಯಕ್ರಮದ ಸಮಾರೋಪದ ಪ್ರಯುಕ್ತ ಅಖಂಡ ಶಿವ ಭಜನೆ, ಉತ್ಸವ ಮೂರ್ತಿಗಳ ಪಲ್ಲಕ್ಕಿ ಮೆರವಣಿಗೆ, ಗಂಗಾಪೂಜೆ ಹಾಗೂ ಮಹಾ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ದೇವಸ್ಥಾನದ ಸೇವಾ ಸಮಿತಿ ಹಾಗೂ ಸಕಲ ಸದ್ಭಕ್ತರ ಸಹಕಾರದೊಂದಿಗೆ ಭಕ್ತಿಪೂರ್ವಕವಾಗಿ ಹಮ್ಮಿಕೊಳ್ಳಲಾಯಿತು.

ಸೆ.10ರ ರಾತ್ರಿ ದೇವಸ್ಥಾನದ ಭಜನಾ ಮಂಡಳಿ ಸೇರಿದಂತೆ ನಗರದ ವಿವಿಧ ದೇವಸ್ಥಾನಗಳ ಭಜನಾ ಮಂಡಳಿಗಳು ಹಾಗೂ ಹಿರಿಯ ಭಜನಾ ಕಲಾವಿದರ ನೇತೃತ್ವದಲ್ಲಿ ಅಹೋರಾತ್ರಿ ಅಖಂಡ ಶಿವ ಭಜನೆ ನಡೆಯಿತು. ಶಿವನ ನಾಮಸ್ಮರಣೆ, ಭಕ್ತಿಗೀತೆಗಳು ಮತ್ತು ಭಜನೆಗಳ ಗಾಯನದಿಂದ ದೇವಸ್ಥಾನದ ಆವರಣ ಸಂಪೂರ್ಣ ಭಕ್ತಿಮಯ ವಾತಾವರಣದಿಂದ ಕಂಗೊಳಿಸಿತು. ನಗರದ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು ರಾತ್ರಿಯಿಡೀ ಭಜನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶಿವನಾಮ ಸ್ಮರಣೆಯಲ್ಲಿ ತೊಡಗಿದರು.

ಸೆ.11ರಂದು ಬೆಳಿಗ್ಗೆಯಿಂದಲೇ ಶ್ರೀ ಶಂಖುಚಕ್ರ ಮಾರುತಿ ದೇವರಿಗೆ ವಿಶೇಷ ಅಭಿಷೇಕ, ಅಲಂಕಾರ, ಅರ್ಚನೆ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಬಳಿಕ ಮಹಾಮಂಗಳಾರತಿ ಜರುಗಿತು. ತದನಂತರ ಉತ್ಸವ ಮೂರ್ತಿಗಳನ್ನು ವಿಶೇಷವಾಗಿ ಅಲಂಕರಿಸಿದ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ, ದೇವಸ್ಥಾನದಿಂದ ಮಂಗಳವಾದ್ಯ, ಭಜನೆ, ಸಂಗೀತ ಹಾಗೂ ಕಳಸ ಹೊತ್ತ ಮಹಿಳೆಯರೊಂದಿಗೆ ಅದ್ದೂರಿ ಮೆರವಣಿಗೆ ನಡೆಸಲಾಯಿತು.

ಪಲ್ಲಕ್ಕಿ ಮೆರವಣಿಗೆಯು ಮಡ್ಡಿಪೇಟೆಯ ಪ್ರಮುಖ ಬೀದಿಗಳ ಮೂಲಕ ಜರಬಾವಿಗೆ ತೆರಳಿ, ಅಲ್ಲಿ ಸಂಪ್ರದಾಯಬದ್ಧವಾಗಿ ಗಂಗಾಪೂಜೆ ನೆರವೇರಿಸಲಾಯಿತು. ನಂತರ ಎಲೆಪೂಜೆ ಸೇರಿದಂತೆ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಿ, ಉತ್ಸವ ಮೂರ್ತಿಗಳನ್ನು ಮತ್ತೆ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿಕೊಂಡು ಭಜನಾ ತಂಡಗಳು ಹಾಗೂ ಮಂಗಳವಾದ್ಯಗಳೊಂದಿಗೆ ಶ್ರೀ ಶಂಖುಚಕ್ರ ಮಾರುತಿ ದೇವಸ್ಥಾನಕ್ಕೆ ಕರೆತರಲಾಯಿತು.

ದೇವಸ್ಥಾನದಲ್ಲಿ ಉತ್ಸವ ಮೂರ್ತಿಗಳಿಗೆ ಮಹಾಮಂಗಳಾರತಿ ಸಲ್ಲಿಸಿದ ಬಳಿಕ ಭಕ್ತರಿಗೆ ತೀರ್ಥ-ಪ್ರಸಾದ ವಿತರಿಸಲಾಯಿತು. ನಂತರ ಮಹಾ ಅನ್ನಸಂತರ್ಪಣೆ ಏರ್ಪಡಿಸಲಾಗಿದ್ದು, ಮಡ್ಡಿಪೇಟೆ ಬಡಾವಣೆ ಸೇರಿದಂತೆ ನಗರದ ವಿವಿಧ ಪ್ರದೇಶಗಳಿಂದ ಆಗಮಿಸಿದ್ದ ನೂರಾರು ಭಕ್ತರು ಮಹಾಪ್ರಸಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಸವಿತಾ ಸಮಾಜದ ನಗರ ಅಧ್ಯಕ್ಷ ವಲ್ಲೂರ ಗೋವಿಂದ, ''ಪ್ರತಿ ವರ್ಷದ ಸಂಪ್ರದಾಯದಂತೆ ಈ ವರ್ಷವೂ ದೇವಸ್ಥಾನದ ಸೇವಾ ಸಮಿತಿ ಹಾಗೂ ಸರ್ವ ಸದ್ಭಕ್ತರ ಸಹಾಯ-ಸಹಕಾರದಿಂದ ಶ್ರಾವಣ ಮಾಸದ ಒಂದು ತಿಂಗಳ ಕಾಲ ಶಿವ ಭಜನೆ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಲಾಗಿದೆ. ಸಮಾರೋಪದ ಅಂಗವಾಗಿ ಅಖಂಡ ಶಿವ ಭಜನೆ, ಪಲ್ಲಕ್ಕಿ ಮೆರವಣಿಗೆ, ಗಂಗಾಪೂಜೆ ಹಾಗೂ ಮಹಾ ಅನ್ನಸಂತರ್ಪಣೆ ಆಯೋಜಿಸಲಾಗಿದೆ'' ಎಂದು ತಿಳಿಸಿದರು.

''ಹಲವಾರು ವರ್ಷಗಳಿಂದ ಶ್ರೀ ಶಂಖುಚಕ್ರ ಮಾರುತಿ ದೇವಸ್ಥಾನದಲ್ಲಿ ಈ ಧಾರ್ಮಿಕ ಸಂಪ್ರದಾಯ ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಸಮಾಜದ ಹಿರಿಯರು, ಯುವಕರು, ಮಹಿಳೆಯರು ಹಾಗೂ ಭಕ್ತರು ಯಾವುದೇ ಪದವಿ, ಸ್ಥಾನಮಾನಗಳ ಭೇದವಿಲ್ಲದೆ ತನು-ಮನ-ಧನದಿಂದ ದೇವಸ್ಥಾನದ ಸೇವೆಯಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆ. ಅಧ್ಯಕ್ಷ, ಕಾರ್ಯದರ್ಶಿ ಅಥವಾ ಖಜಾಂಚಿ ಎಂಬ ಸ್ಥಾನಮಾನಗಳಿಗಿಂತ ಸೇವೆಯೇ ಇಲ್ಲಿ ಮುಖ್ಯವಾಗಿದೆ. ಪ್ರತಿಯೊಬ್ಬರೂ ದೇವಸ್ಥಾನದ ಕಾರ್ಯಕ್ರಮವನ್ನು ತಮ್ಮದೇ ಕಾರ್ಯಕ್ರಮವೆಂದು ಭಾವಿಸಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುತ್ತಿರುವುದು ಸಂತಸದ ಸಂಗತಿ'' ಎಂದು ಹೇಳಿದರು.

''ನಾನು ಸವಿತಾ ಸಮಾಜದ ನಗರ ಅಧ್ಯಕ್ಷನಾಗಿದ್ದರೂ ಸಮಾಜದ ಬಂಧುಗಳು ಪ್ರತಿಯೊಂದು ಧಾರ್ಮಿಕ ಕಾರ್ಯಕ್ರಮವನ್ನೂ ಸ್ವತಃ ಜವಾಬ್ದಾರಿಯಿಂದ ಸಂಘಟಿಸಿಕೊಂಡು ಹೋಗುತ್ತಾರೆ. ನನಗೆ ಯಾವುದೇ ಒತ್ತಡ ಬಾರದಂತೆ ಎಲ್ಲ ಕೆಲಸಗಳನ್ನೂ ಸಮನ್ವಯದಿಂದ ನಿರ್ವಹಿಸುತ್ತಾರೆ. ನಮ್ಮ ಸಮಾಜದ ಬಂಧುಗಳು ಮಾತೃ ಹೃದಯದಿಂದ ಸೇವೆಯಲ್ಲಿ ತೊಡಗಿಕೊಳ್ಳುತ್ತಿರುವುದೇ ಈ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯಲು ಪ್ರಮುಖ ಕಾರಣವಾಗಿದೆ'' ಎಂದು ಗೋವಿಂದ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀ ಶಂಖುಚಕ್ರ ಮಾರುತಿ ದೇವರ ಮಹಿಮೆಯನ್ನು ಉಲ್ಲೇಖಿಸಿದ ಅವರು, ''ಶ್ರೀ ಶಂಖುಚಕ್ರ ಮಾರುತಿ ಅತ್ಯಂತ ಶಕ್ತಿಶಾಲಿ ದೇವರು. ಭಕ್ತರು ಶ್ರದ್ಧಾ-ಭಕ್ತಿಯಿಂದ ದೇವರನ್ನು ಸ್ಮರಿಸಿ ಸೇವೆ ಸಲ್ಲಿಸಿದರೆ ಅವರ ಇಷ್ಟಾರ್ಥಗಳು ನೆರವೇರುತ್ತವೆ ಎಂಬ ಅಪಾರ ನಂಬಿಕೆ ಇದೆ. ಮಡ್ಡಿಪೇಟೆಯ ಶ್ರೀ ಶಂಖುಚಕ್ರ ಮಾರುತಿ ದೇವಸ್ಥಾನವನ್ನು ಒಂದು ಶಕ್ತಿಪೀಠವೆಂದರೂ ತಪ್ಪಾಗಲಾರದು. ಬಡಾವಣೆ ಹಾಗೂ ನಗರದ ಜನರ ಕಷ್ಟ-ಕಾರ್ಪಣ್ಯಗಳನ್ನು ನಿವಾರಿಸಿ, ಜೀವನದಲ್ಲಿ ಸುಖ, ಶಾಂತಿ, ಆರೋಗ್ಯ ಮತ್ತು ನೆಮ್ಮದಿ ಕರುಣಿಸುತ್ತಿರುವ ದೇವರ ಮೇಲೆ ಭಕ್ತರಿಗೆ ಅಪಾರ ನಂಬಿಕೆಯಿದೆ'' ಎಂದರು.

''ದೇವಸ್ಥಾನದಲ್ಲಿ ಪ್ರತಿ ತಿಂಗಳೂ ಮಹಾಪ್ರಸಾದ ಅನ್ನಸಂತರ್ಪಣೆ ನಿರಂತರವಾಗಿ ನಡೆಯುತ್ತಿರುವುದು ದೇವರ ಕೃಪೆ ಹಾಗೂ ಭಕ್ತರ ಸಹಕಾರದಿಂದಲೇ ಸಾಧ್ಯವಾಗಿದೆ. ದೇವಸ್ಥಾನದ ಧಾರ್ಮಿಕ, ಸಾಮಾಜಿಕ ಹಾಗೂ ಸೇವಾ ಕಾರ್ಯಗಳಿಗೆ ನಿರಂತರ ಸಹಕಾರ ನೀಡುತ್ತಿರುವ ಸಮಾಜದ ಹಿರಿಯರು, ಬಂಧುಗಳು ಹಾಗೂ ಸರ್ವ ಸದ್ಭಕ್ತರಿಗೆ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತೇನೆ'' ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ದೇವಸ್ಥಾನವನ್ನು ವಿಶೇಷವಾಗಿ ಅಲಂಕರಿಸಲಾಗಿದ್ದು, ಅಖಂಡ ಶಿವ ಭಜನೆ ಹಾಗೂ ಪಲ್ಲಕ್ಕಿ ಮೆರವಣಿಗೆಯು ಭಕ್ತರ ಗಮನ ಸೆಳೆಯಿತು. ಮಂಗಳವಾದ್ಯಗಳ ನಿನಾದ, ಶಿವನಾಮ ಸ್ಮರಣೆ ಮತ್ತು ಭಕ್ತಿಗೀತೆಗಳಿಂದ ಮಡ್ಡಿಪೇಟೆ ಪ್ರದೇಶದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಈ ಸಂದರ್ಭದಲ್ಲಿ ಶ್ರೀ ಶಂಖುಚಕ್ರ ಮಾರುತಿ ದೇವಸ್ಥಾನದ ಅರ್ಚಕರು, ದೇವಸ್ಥಾನದ ಸೇವಾ ಸಮಿತಿಯ ಪದಾಧಿಕಾರಿಗಳು, ಕಾರ್ಯಕರ್ತರು, ಸವಿತಾ ಸಮಾಜದ ಹಿರಿಯರು, ಮುಖಂಡರು, ಮಹಿಳೆಯರು, ಯುವಕರು ಹಾಗೂ ಮಡ್ಡಿಪೇಟೆ ಬಡಾವಣೆ ಮತ್ತು ನಗರದ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ಸದ್ಭಕ್ತರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K